

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor : MARUTI BASAVANTAPPA HOSAMANI
Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
RNI REG No. : KARKAN/2016/75068

SIHI KAHI
KANNADA DAILY MORNING
BAGALKOT

Volume : 08 | Issue : 44 | Wednesday 22-10-2025 | E-mail : maruti.b.hosamani76@gmail.com | Page: 4 | Price : Rs. 1/-


## ಅ.29 ರಿಂದ ಕರೆಗುಡ್ಡ ಶ್ರೀ ಮಹಾಂತೇಶ್ವರ ಮಠದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು – ಶ್ರೀ ನೀರಂಜನ ದೇವರು

**ಸಿಹಿ ಕಹಿ ಸುದ್ದಿ,**

**ಕರೆಗುಡ್ಡ:**ಮಾನ್ವಿತಾಲೂಕಿನಮಾನ್ವಿಪಟ್ಟಣದ ಶ್ರೀ ಒಳಬಳ್ಳಾರಿ ಶ್ರೀ ಚನ್ನಬಸವೇಶ್ವರ ಪ್ರಸಾದ ನಿಲಯದ ಸಭಾಂಗಣದಲ್ಲಿ ತಾಲೂಕಿನ ಕ-ರೆಗುಡ್ಡ ಗ್ರಾಮದಲ್ಲಿನ ಶ್ರೀ ಮಹಾಂತೇಶ್ವರ ಮಠದ ವಿವಿಧ ಧಾರ್ಮಿಕ ಕಾರ್ಯಕ್ರಮಗಳ ಕುರಿತುನಡೆದಶ್ರೀಮಠದಭಕ್ತರಪೂರ್‌ಭಾವಿ ಸಭೆಯಲ್ಲಿ ಮೈಸೂರಿನ ನೀರಂಜನದೇವರು ಮಾತನಾಡಿ ತಾಲೂಕಿನ ಕರೆಗುಡ್ಡ ಶ್ರೀ ಮಹಾಂತೇತ್ವರ ಮಠವು ಶ್ರೀ ಮಹಾಂತೇಶ್ವರ ಸ್ವಾಮಿಗಳ ತಪೋ ಭೂಮಿಯಾಗಿದ್ದು ಶರೀ ಮಠದಲ್ಲಿ ಶ್ರೀ ಅಂಬಮಠದ ಶ್ರೀ ಅಂಬದೇವಿಯು ನೆಲೆಸಿದ ಪುಣ್ಯಮಯ ಜಾಗೃತ ಕ್ಷೇತ್ರವಾಗಿದ್ದು ಶ್ರೀಮಠದ ಪ್ರಸ್ತುತ ಶ್ರೀಗಳಾದ ಶ್ರೀ ಮಹಾಂತಲಿಂಗ ಮಹಾಸ್ವಾಮಿಗಳ ಪಟ್ಟಾಧಿಕಾರ ಮಹೋತ್ಸವದ ರಜತಮಹೋತ್ಸವ ಕಾರ್ಯಕ್ರಮವನ್ನು ಶ್ರೀ ಮಠದ ಭಕ್ತರು ವಿಶೇಷವಾಗಿ ಆಚರಿಸುವ ಉದ್ದೇಶದಿಂದ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿ ಕೊಳ್ಳಲಾಗಿದ್ದು. ಅ.29 ರಿಂದ ನ.6 ರವರಿಗೆ ಪ್ರತಿದಿನ ಸಂಜೆ 6–30 ರಿಂದ ಮಹಾತ್ಮರ ಜೀವನ ದರ್ಶನ ಪ್ರವಚನ ಕಾರ್ಯಕ್ರಮ ನಡೆಯಲಿದೆ. ನ.1 ರಂದು ಬೆಳಿಗ್ಗೆ 9 ರಿಂದ ಗ್ರಾಮದ ಪ್ರಮುಖ ರಾಜ ಬೀದಿಗಳಲ್ಲಿ ಬಾಳೆಹೊನ್ನೂರು ರಂಭಾಪುರಿ ಪೀಠದ ಜಗದ್ಗುರು ಶ್ರೀ ವೀರ ಸಿಂಹಾಸನಾಧೀಶ್ವರ ಪ್ರಸನ್ನ ರೇಣುಕ ಡಾ, ವೀರ ಸೋಮೇಶ್ವರ ರಾಜದೇಶಿ ಕೇಂದ್ರ



ಶಿವಾಚಾರ್ಯ ಭಗವತ್ಪಾದರ ಅಡ್ಡಪಲ್ಲಕ್ಕಿ ಮಹೋತ್ಸವ ಮತ್ತು ಧರ್ಮ ಸಭೆ ಕಾರ್ಯಕ್ರಮ ನಡೆಯಲಿದೆ. ನ.7 ರಂದು ಬೆಳಿಗ್ಗೆ 9 ರಿಂದ ಶ್ರೀಮಠದ ನೂತನ ಗೋಪುರಗಳ ಲೋಕಾರ್ಪಣೆ ಮತ್ತು ಐದು ಸಾವಿರದ ಒಂದು ಸುಮಂಗಲಿಯರಿಂದ ಉಡಿ ತುಂಬುವ ಕಾರ್ಯಕ್ರಮ, ಸಂಗೀತ ಗೋಷ್ಠಿ, ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ದೀಪೋತ್ಸವ ನ.8 ರಂದು ಜಂಗಮ ವಟುಗಳಿಗೆ ಅಯ್ಯಾಚಾರ, ರಥಕ್ಕೆ ಕಳಸಾ ರೋಹಣ ಸಂಜೆ 5 ಕ್ಕೆ ಗಜಲಕ್ಷ್ಮಿಯ ಮೇಲೆ ಅಂಬಾರಿ ಮೆರವಣಿಗೆ ರಥೋತ್ಸವ ಶ್ರೀಮಠದ ಶ್ರೀ ಮಹಾಂತಲಿಂಗ ಶಿವಾಚಾರ್ಯ ಮಹಾ ಸ್ವಾಮಿಗಳಿಗೆ ಗುರು ವಂದನೆ ಹಾಗೂ ಬೆಳ್ಳಿಯಿಂದ

**ಪಟ್ಟಣದ ಶ್ರೀ ಒಳಬಳ್ಳಾರಿ ಶ್ರೀ ಚನ್ನಬಸವೇಶ್ವರ ಪ್ರಸಾದ ನಿಲಯದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಕರೆಗುಡ್ಡ ಶ್ರೀ ಮಠದ ಕಾರ್ಯಕ್ರಮಗಳ ಭಿತ್ತಿ ಪತ್ರಗಳನ್ನು ಬಿಡುಗಡೆ ಮಾಡಲಾಯಿತು.**

ತುಲಾಭಾರ ಕಾರ್ಯಕ್ರಮ ಸೇರಿದಂತೆ ವಿವಿಧ ಕಾರ್ಯಕ್ರಮಗಳು ನಡೆಯಲಿದ್ದು ಶ್ರೀ ಮಠದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಿದರು.

ದರೂರುಮಠದಶ್ರೀಕೊಟ್ಟೂರುಸ್ವಾಮಿಗಳು, ಹೊಸಪೇಟೆಯ ಶ್ರೀ ಚಂದ್ರಶೇಖರ ಗುರುಗಳು, ಕರೆಗುಡ್ಡ ಶ್ರೀ ಮಹಾಂತೇಶ್ವರ ಮಠದ ಕಿರಿಯ ಶ್ರೀಗಳಾದ ಸಂಗನ ಬಸವ ದೇವರು, ತಾ.ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹಾರ ಪಾಟೀಲ್, ಮುಖಂಡರಾದ ತಿಮ್ಮರೆಡ್ಡಿ ಭೋಗವಾತಿ, ಮಲ್ಲನಗೌಡ ನಕ್ಕುಂದಿ, ಶಿವಯ್ಯಸ್ವಾಮಿ, ಗಣೇಕಲ್ ಮಲ್ಲನಗೌಡ, ಶರಣೆಗೌಡ ನಕ್ಕುಂದಿ, ಮೌನೇಶಗೌಡ. ಹೆಚ್ ಶಿವಯ್ಯಸ್ವಾಮಿ ಗವಿಗಟ್, ಸಿದ್ದರಾಮಯ್ಯಸ್ವಾಮಿ, ಚಂದ್ರಶೇಖರ ಕೋಟ್ನೆಕಲ್, ಮಹಾಂತೇಶ್ ಗವಿಗಟ್, ರಾಜಶೇಖರಯ್ಯಸ್ವಾಮಿ, ಶ್ರೀಕಾಂಗೂಳಿ, ಸುರೇಶ ನಾಡಗೌಡ, ಅಮರೇಶ ಗವಾಯಿ, ಸೇರಿದಂತೆ ಇನ್ನಿತರರು ಇದ್ದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಹುಸೇನ್.ಭಾಷಾ.ನಕ್ಕುಂದಿ.ಮಾನ್ವಿ**

## ಚನ್ನಮ್ಮ ಕಿತ್ತೂರು ಉತ್ಸವ 2025 ಕ್ಕೆ ಸುಗಮ ಸಂಗೀತ ಕಾರ್ಯಕ್ರಮಕ್ಕೆ – ತಿಮ್ಮನಹಳ್ಳಿ ಶ್ರೀ ಡಿ.ಬಿ ನಿಂಗರಾಜು ರವರು ಆಯ್ಕೆ

**ಸಿಹಿ ಕಹಿ ಸುದ್ದಿ,**

**ಕೂಡ್ಲಿಗಿ :** ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲೂಕಿನ ಗಡಿ ಗ್ರಾಮ ತಿಮ್ಮನಹಳ್ಳಿ ಗ್ರಾಮದ ಯುವ ಗಾಯಕ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತಗಾರ ಡಿ.ಬಿ ನಿಂಗಪ್ಪ ಅವರಿಗೆ ಈ ಬಾರಿ ಬೆಳಗಾವಿ ಜಿಲ್ಲೆಯ ಕಿತ್ತೂರುನಲ್ಲಿ ನಡೆಯುವ ರಾಣಿ ಚೆನ್ನಮ್ಮ ಉತ್ಸವದ ಕಿತ್ತೂರು ರಾಣಿ ಚೆನ್ನಮ್ಮ ಕೋಟೆ ಆವರಣದ ಮುಖ್ಯ ವೇದಿಕೆಯಲ್ಲಿ ಸುಗಮ ಸಂಗೀತ ಪ್ರಸ್ತುತಿಗೆ ಒಲಿದು ಬಂದ ಅವಕಾಶ ನಮ್ಮ ವಿಜಯನಗರ ಜಿಲ್ಲೆಯ ಯುವ ಪ್ರತಿಭೆ ನಮ್ಮ ಹೆಮ್ಮೆ ಕೂಡ್ಲಿಗಿ ತಾಲೂಕಿನ ತಿಮ್ಮನಹಳ್ಳಿ ಸರ್ವ ಸದಸ್ಯರೆಲ್ಲರೂ ಹರ್ಷ ವ್ಯಕ್ತಪಡಿಸಿದ್ದಾರೆ.

ಒಟ್ಟಾರೆಯಾಗಿ ಹೇಳುವುದಾದರೆ ಇವರ ಕುಟುಂಬ ಕಲಾವಿದರ ಕುಟುಂಬವಾಗಿದೆ. ಮೊದಲಿಗೆ ಪಾಲಜ್ಜನವರ ವಂಶದ ಕುಡಿ ತಂದೆ ಹಿರೇಹಳ್ಳಿ ದುರುಗಪ್ಪ ಇವರ ಕೋಲಾಟ ನಾಟಕ ಕಲಾವಿದರು. ಹಾಗೂ ತಾಯಿ ಬಸಮ್ಮ ಅಕ್ಕ ಚನ್ನಮ್ಮನವರ ಸೋಬಾನೆ ಪದ, ನಂತರ ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ತಾಲೂಕಿನ ಚಿನ್ನೊಬನಹಳ್ಳಿ ಗ್ರಾಮದ ರಂಗ ಭೂಮಿಯ ಗಾನ ಕೋಗಿಲೆ, ದ್ವಿಕಂಠ ವಾಹಿನಿ, ಡಿ.ಒ ಮುರಾರ್ಜಿ ಅವರ ಗರಡಿಯಲ್ಲಿ ಸಂಗೀತ ಅಭ್ಯಾಸ ಮಾಡಿದ್ದು, ಸಪ್ತ ಸ್ವರಗಳನ್ನು ಉಜ್ಜಯಿನಿಯ ವಾಗೀಶ್ ಗವಾಯಿಗಳಿಂದ, ಸಿದ್ದಯ್ಯನಕೋಟೆ ಶ್ರೀ ವಿಜಯ ಮಹಾಂತೇಶ್ವರ ಶಾಖಾ ಮಠದಲ್ಲಿ ವಿದ್ವತ್ ಪದವಿ ಪಡೆದು, ಹಂಪಿ ಕನ್ನಡ ವಿಶ್ವವಿದ್ಯಾಲಯದಲ್ಲಿ ಸಂಗೀತದಲ್ಲಿ ಸ್ನಾತಕೋತ್ತರ ಸಂಗೀತ ಪದವಿ ಪಡೆದಿದ್ದಾರೆ.



ಗಾಯಕ ಡಿ.ಬಿ ನಿಂಗಪ್ಪ ಅವರು ಗಾಯನ, ಸಂಗೀತ, ವಚನ ಗಾಯನ, ದಾಸವಾಣಿ, ಜಾನಪದ ಸಂಗೀತದ ಮೂಲಕ ಸಂಗೀತ ಕ್ಷೇತ್ರದಲ್ಲಿ ಸಾಧನೆ ಮಾಡುತ್ತಿದ್ದು, ಈ ಬಾರಿ ರಾಣಿ ಚೆನ್ನಮ್ಮ ಕಿತ್ತೂರು ಉತ್ಸವದಲ್ಲಿ ಇದೇ ಅಕ್ಟೋಬರ್ 23–10–2025 ಗುರುವಾರ ರಂದು ರಾಣಿ ಚೆನ್ನಮ್ಮ ಕೋಟೆ ಆವರಣದ ಮುಖ್ಯ ವೇದಿಕೆಯ ಮೂಲಕ ಸುಗಮ ಸಂಗೀತಕ್ಕೆ ಧ್ವನಿ ಯಾಗಲಿದ್ದಾರೆ.

**ಹೋಬಳಿ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಕೆ.ಎಸ್ ವೀರೇಶ್ ಕೆ ಹೊಸಹಳ್ಳಿ**

## ನ. 7 ರಂದು ಡಾ. ಚೆನ್ನಬಸವ ಶ್ರೀಗಳ ಪ್ರಥಮ ಸ್ಮರಣೋತ್ಸವ

**ಜಮಖಂಡಿ :** ಲಿಂಗೈಕ್ಯ ಡಾ. ಅಭಿನವಕುಮಾರ ಚೆನ್ನಬಸವ ಮಹಾಸ್ವಾಮಿಗಳ ಪ್ರಥಮ ಪುಣ್ಯ ಸ್ಮರಣೋತ್ಸವವು ನವೆಂಬರ್ 7 ರಂದು ಓಲೆಮಠದ ಆವರಣದಲ್ಲಿ ಜರುಗಲಿದೆ ಎಂದು ಓಲೆಮಠದ ಆನಂದ ದೇವರು ಹೇಳಿದರು.

ಪ್ರಥಮ ಪುಣ್ಯ ಸ್ಮರಣೋತ್ಸವ ಆಚರಣೆ ಕುರಿತು ಓಲೆಮಠದ ಸಭಾಂಗಣದಲ್ಲಿ ಬುಧವಾರ ಸಂಜೆ ನಡೆದ ಶ್ರೀಮಠದ ಸದ್ಭಕ್ತರ ಪೂರ್ವಭಾವಿ ಸಭೆಯ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಪುಣ್ಯ ಸ್ಮರಣೋತ್ಸವ ಅಂಗವಾಗಿ ಪೂಜ್ಯಶ್ರೀ ನಿರಂಜನ ಸ್ವಾಮಿಗಳಿಂದ ಅಕ್ಟೋಬರ 24 ರಿಂದ ನವೆಂಬರ್ 6 ರವರೆಗೆ ಪ್ರತಿದಿನ ಬೆಳಿಗ್ಗೆ 5–30 ರಿಂದ 6–30 ರವರೆಗೆ ಧ್ಯಾನ, ಪ್ರಾಣಾಯಾಮ, ಯೋಗ ಕುರಿತು ಶಿಬಿರ ಮತ್ತು ಸಂಜೆ 6–30 ರಿಂದ 7–30 ರವರೆಗೆ ಆಧ್ಯಾತ್ಮಿಕ ಪ್ರವಚನ ಹಮ್ಮಿಕೊಳ್ಳಲಾಗುವುದು.

ವ್ುುದ್ದೋಬಿಹಾಳ ದಿಂದ



ಆಗಮಿಸಲಿರುವ ಲಿಂಗೈಕ್ಯ ಡಾ. ಚೆನ್ನಬಸವ ಶ್ರೀಗಳ ಮೂರ್ತಿಯನ್ನು ನವೆಂಬರ್ ಏಳರಂದು ಬೆಳಿಗ್ಗೆ 8 ಗಂಟೆಗೆ ನಗರದಬಸವೇಶ್ವರವೃತ್ತದಲ್ಲಿಶ್ರದ್ಧಾ ಭಕ್ತಿಯಿಂದ ಬರಮಾಡಿಕೊಂಡು ತಲೆಯ ಮೇಲೆ ವಚನ ಪುಸ್ತಕ ಹೊತ್ತ ಮಹಿಳೆಯರು, ವಾದ್ಯಮೇಳದೊಂದಿಗೆ ಭವ್ಯ ಮೆರವಣಿಗೆ ಆರಂಭಿಸಿ ಪ್ರಮುಖ ಬೀದಿಗಳಲ್ಲಿ ಸಾಗಿಬಂದು ಓಲೆಮಠಕ್ಕೆ ತಂದು ಮೂರ್ತಿ ಪ್ರತಿಷ್ಠಾಪನೆ ನೆರವೇ-ರಿಸಲಾಗುವುದು.

ನವೆಂಬರ7ರಂದುಬೆಳಿಗ್ಗೆ10ಗಂಟೆಗೆ ಗದುಗಿನ ತೋಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ಧರ್ಮಸಭೆ ನೆರವೇರಲಿದೆ.

ನಂತರ ಮಹಾಪ್ರಸಾದ ಜರುಗಲಿದೆ ಎಂದರು.

ಹುನ್ನೂರಿನ ವಿಶ್ವನಾಥ ಶಾಸ್ತ್ರಿಗಳು ಸಾನಿಧ್ಯ ವಹಿಸಿ ಮಾತನಾಡಿ, ಅನ್ನ, ಅರಿವು, ಆಶ್ರಯ ನೀಡಿ ತ್ರಿವಿಧ ದಾಸೋಹಿಗಳೆನಿಸಿದ್ದ ಡಾ. ಚೆನ್ನಬಸವ ಶ್ರೀಗಳ ಪುಣ್ಯ ಸ್ಮರಣೋತ್ಸವ ಒಂದು ಪವಿತ್ರ ಕಾರ್ಯವಾಗಿದೆ.

ಓಲೆಮಠದ ವೈಭವ ರಾಜ್ಯದಾದ್ಯಂತ ಪಸರಿಸಲು ಶ್ರೀಗಳು ಕಾರಣರಾಗಿದ್ದರು ಎಂದು ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ರವಿ ತೇಲಿ, ಕಾಡು ಮಾಳಿ, ರವಿ ಯಡಹಳ್ಳಿ, ಸಿ. ಎಸ್. ಬಾಂಗಿ, ಬಿ. ಎನ್. ಗಸ್ತಿ, ಶಾಮರಾವಘಾಟಗೆ,ಕೆ.ಕೆ.ತುಪ್ಪದ, ರಾಜೇಸಾಬಕಡಕೋಳ,ಸದಾಶಿವ ಕವಟಗಿ, ರಾಜಶೇಖರ ಅಕ್ಕಿ, ಪ್ರದೀಪ ಮಹಾಲಿಂಗಪುರಮಠ, ಭಾಗ್ಯಶ್ರೀ ಕೋಟಿ ತಮ್ಮ ಅನಿಸಿಕೆ, ಅಭಿಪ್ರಾಯ, ಸಲಹೆ, ಸೂಚನೆ ನೀಡಿದರು.

ಎಸ್.ವೈ.ಪಾಟೀಲಸ್ವಾಗತಿಸಿದರು. ಡಾ. ಟಿ.ಪಿ. ಗಿರಡ್ಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್. ಎಚ್. ಮಠಪತಿ ನಿರೂಪಿಸಿದರು. ಅಣ್ಣಾಸಾಬ ಜಗದೇವ ವಂದಿಸಿದರು.

## ಬನಹಟ್ಟಿಯ ಎಸ್‌ಆರ್‌ಎ ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ ಆಯ್ಕೆ



**ಬನಹಟ್ಟಿ :** ಇಲ್ಲಿಯ ಎಸ್. ಆರ್. ಎ. ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳು ಇತ್ತೀಚೆಗೆ ಮುಕ್ತಾಯಗೊಂಡ ಜಿಲ್ಲಾ ಮಟ್ಟದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾಗಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ ಎಂದು ಪ್ರಾಚಾರ್ಯ ಬಿ. ಆರ್. ಗೊಡ್ಡಾಳೆ ತಿಳಿಸಿದರು. ಎಂ. ಆರ್. ದೊಡ್ಡಪ್ಪಗೋಳ ಎತ್ತರ ಜಿಗಿತ ದ್ವಿತೀಯ, ಬಿ. ಪಿ. ಧೋತ್ರೆ 72 ಕೆ.ಜಿ. ವಿಭಾಗದ ರೋಮನ್ ಕುಸ್ತಿಯಲ್ಲಿ ಪ್ರಥಮ ಮತ್ತು ಗುಂಡು ಎಸೆತದಲ್ಲಿ ದ್ವಿತೀಯ, 60 ಕೆ.ಜಿ. ಜೂಡೋದಲ್ಲಿ ಕಲ್ಮೇಶ ಹನಗಂಡಿ ಪ್ರಥಮ, ಪ್ರಜ್ವಲ ಸಣಕಲ್ ಚೆಸ್ ನಲ್ಲಿ ಪ್ರಥಮ, ಅಪೂರ್ವಾ ಜಾಧವ 57 ಕೆ.ಜಿ. ಫ್ರೀಸ್ಟೈಲ್ ಕುಸ್ತಿಯಲ್ಲಿ ಪ್ರಥಮ, ಅನುಷಾ ಬಿರಾದಾರ ಪಾಟೀಲ: 70 ಕೆ.ಜಿ. ಜುಡೋ ವಿಭಾಗದಲ್ಲಿ ದ್ವಿತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಅದೇ ರೀತಿ ಗುಂಪು ಸ್ಪರ್ಧೆಗಳಲ್ಲಿ ಸುದೀಪ ಈಟಿ, ಸುಮೀತ ಈಟಿ ಮತ್ತು ಆಕಾಶ ಮುಂಡಾಸರನ್ನು ಒಳಗೊಂಡ ಟೇಬಲ್ ಟೆನ್ನಿಸ್ ತಂಡ ಪ್ರಥಮ ಸ್ಥಾನ, ಎಫ್. ಆರ್. ತಾಂಬೋಳಿ,

ಓ. ಎ. ಪತ್ತಾರ, ಎ. ಜೆ. ಉಮರಾಣಿ ವಿದ್ಯಾರ್ಥಿಗಳು ಖೋಖೋದಲ್ಲಿ ಜಿಲ್ಲಾ ತಂಡಕ್ಕೆ ಮತ್ತು ಎಸ್. ಜಿ. ಬೆಂಡವಾಡ, ಪಿ. ಕೆ. ಕೋಪರ್ಡೆ, ಐ. ಆರ್. ಸಿಂಧೂರ, ಎಸ್. ಎಂ. ಹಿಪ್ಪರಗಿ, ಎಂ. ಕೆ. ಜನವಾಡ ಮತ್ತು ಎಸ್. ಆರ್. ಅಬಕಾರ ಜಿಲ್ಲಾ ಹಾಕಿ ತಂಡಕ್ಕೆ ಆಯ್ಕೆಯಾಗಿದ್ದು ಇವರು ರಾಜ್ಯ ಮಟ್ಟದಲ್ಲಿ ಸ್ಪರ್ಧೆ ಮಾಡಲಿದ್ದಾರೆ. ಇವರ ಸಾಧನೆಗೆ ಜನತಾ ಶಿಕ್ಷಣ ಸಂಘದ ಚೇರಮನ್ನರು, ಸರ್ವ ಸದಸ್ಯರು, ಕಾಲೇಜಿನ ದೈಹಿಕ ನಿರ್ದೇಶಕ ಶಂಕರ ಸೊಲ್ಲಾಪುರ, ಸಿಬ್ಬಂದಿ ವರ್ಗ ಹರ್ಷ ವ್ಯಕ್ತಪಡಿಸಿದ್ದಾರೆ.

## ವಿದ್ಯೆ ಕಲಿಸಿದ ಗುರು ಶ್ರೇಷ್ಠ

**ಬನಹಟ್ಟಿ :** ಪ್ರತಿಯೊಬ್ಬರಿಗೂ ಜೀವನದಲ್ಲಿ ಮೂರು ರೀತಿಯ ಗುರುಗಳು ದೊರೆಯುತ್ತಾರೆ. ಪ್ರಾರಂಭದಲ್ಲಿ ತಂದೆ ತಾಯಿ, ನಂತರ ವಿದ್ಯೆ ಕಲಿಸುವ ಗುರು ಮತ್ತು ಅಧ್ಯಾತ್ಮಿಕ ಗುರು. ಇವರಲ್ಲಿ ವಿದ್ಯೆ ಕಲಿಸಿದ ಗುರುವಿಗೆ ಶ್ರೇಷ್ಠ ಸ್ಥಾನವಿದೆ ಎಂದು ಬನಹಟ್ಟಿ ಹಿರೇಮಠದ ಶರಣಬಸವ ಶಿವಾಚಾರ್ಯರು ನುಡಿದರು.

ಅವರು ಇತ್ತೀಚೆಗೆ ಬನಹಟ್ಟಿಯ ಎಸ್ ಟಿ ಸಿ ಕಾಲೇಜಿನಲ್ಲಿ 2005 ರಲ್ಲಿ ವಾಣಿಜ್ಯ ವಿಭಾಗದಲ್ಲಿ ಪದವಿ ಪಡೆದುಕೊಂಡ ವಿದ್ಯಾರ್ಥಿಗಳು ಹಮ್ಮಿಕೊಂಡ ಗುರುವಂದನೆ ಮತ್ತು ಸ್ನೇಹ ಸಂಗಮ ಕಾರ್ಯಕ್ರಮದಲ್ಲಿ ಮಾತನಾಡಿದರು.

ನಿವೃತ್ತ ಪ್ರಾಚಾರ್ಯ ಎಸ್. ಎಸ್. ಹೂಲಿ ಮಾತನಾಡಿ,



ವಿದ್ಯಾರ್ಥಿಗಳು ಸತತವಾದ ಪ್ರಯತ್ನದ ಮೂಲಕ ಶ್ರೇಷ್ಠ ಸಾಧನೆ ಮಾಡಲು ಸಾಧ್ಯ.

ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವುದರ ಜೊತೆಗೆ ಉತ್ತಮ ಶಿಕ್ಷಣವನ್ನು ನೀಡಬೇಕು. ಕಲಿತ ಶಿಕ್ಷಣ ಸಂಸ್ಥೆಗೆ ಕೀರ್ತಿ ತರುವ ಕಾರ್ಯವನ್ನು ಮಾಡಬೇಕು ಎಂದು ತಿಳಿಸಿದರು.

ರಬಕವಿಯಬ್ರಹ್ಮಾನಂದಆಶ್ರಮದ ಗುರುಸಿದ್ದೇಶ್ವರ ಸ್ವಾಮೀಜಿ, ಮಹೇಂದ್ರ ಹೊರಗಿನಮನಿ, ಆನಂದ ಹಾರೂಗೇರಿ, ವಿಜಯ ಪೂಜಾರಿ,

ಗೀತಾ ಪಟ್ಟಣ, ಲಕ್ಷ್ಮಿ ಹಂಜಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಗುರುಗಳಾದ ಬಿ. ಆರ್. ಬಿರಾದಾರ, ಸಂಗಮೇಶ ಮಟೋಳಿ, ವೈ.ಡಿ.ಬಾಗಿ, ಅಶೋಕ ಜಾಧವ, ಪ್ರಾಚಾರ್ಯ ಜಿ. ಆರ್. ಜುನ್ನಾಯ್ಕರ್, ವಿಶ್ವಜ ಕಾಡದೇವರ, ಗೋಕುಲ ಕಾಬ್ರಾ, ಶೋಭಾಪಿಟಗಿ,ಹಳೆಯವಿದ್ಯಾರ್ಥಿ ರಮೇಶ ಸವದಿಯವರನ್ನು ಸನ್ಮಾನಿಸಲಾಯಿತು.

ಶಿವು ಇಟ್ನಾಳ, ರವಿ ಹಾರೂಗೇರಿ, ರಾಜು ಆಸಂಗಿ, ಶಂಕರ ನ್ಯಾಮಗೌಡ, ಚಂದ್ರು ಹನಗಂಡಿ, ಮಹೇಶ ಧಡೂತಿ, ಮಹಾಂತೇಶ ಬಂಗಿ, ಶಿವಾನಂದ ಜಾಲಿಗಿಡದ, ಮಹಾಂತೇಶ ಚನ್ನಪ್ಪಗೋಳ, ರಾಘು ಜಮಖಂಡಿ, ಈರಪ್ಪ ಚಿಂಚಖಂಡಿ, ರಾಹುಲ ಶಿರಹಟ್ಟಿ ಸೇರಿದಂತೆ ಇನ್ನೂ ಅನೇಕರು ಭಾಗವಹಿಸಿದ್ದರು.

## ರಬಕವಿ–ಬನಹಟ್ಟಿ ಸಿಪಿಐಯಾಗಿ ಎಚ್. ಆರ್. ಪಾಟೀಲ ಅಧಿಕಾರ ಸ್ವೀಕಾರ

**ರಬಕವಿ–ಬನಹಟ್ಟಿ:** ವೃತ್ತದ ಸಿಪಿಐ ಆಗಿ ಎಚ್. ಆರ್. ಪಾಟೀಲ ಬುಧವಾರ ಸಂಜೆ ಅಧಿಕಾರ ವಹಿಸಿಕೊಂಡರು.

ಈ ಹಿಂದೆ ಇದ್ದ ಸಿಪಿಐ ಸಂಜೀವ ಬಳಗಾರ ಅವರನ್ನು ವಿಜಯಪುರಕ್ಕೆ ವರ್ಗಾವಣೆ ಮಾಡಿ ಸರ್ಕಾರ ಆದೇಶ ಹೊರಡಿಸಿದ ಹಿನ್ನೆಲೆಯಲ್ಲಿ ಆ ಸ್ಥಾನಕ್ಕೆ ಬಾಗಲಕೋಟ ಗ್ರಾಮೀಣ ಪೋಲೀಸ್ ಠಾಣೆಯ ಸಿಪಿಐಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಎಚ್. ಆರ್. ಪಾಟೀಲ ಅವರಿಗೆ ಬನಹಟ್ಟಿ ಪೋಲೀಸ್ ವೃತ್ತ ನಿರೀಕ್ಷಕರಾಗಿ ಸರ್ಕಾರ ಆದೇಶ ಹೊರಡಿಸಿದ ಹಿನ್ನೆಲೆಯಲ್ಲಿ ಬುಧವಾರ ಸಂಜೆ ಅಧಿಕಾರ ಸ್ವೀಕರಿಸಿದರು. ಈ ಹಿಂದೆ ಚಡಚಣ, ಮುಧೋಳ, ಬಾಗಲಕೋಟ ಗ್ರಾಮೀಣ ಸಿಪಿಐಯಾಗಿ ಕರ್ತವ್ಯ ನಿರ್ವಹಿಸಿ ಬುಧವಾರ ಬನಹಟ್ಟಿ ಪೋಲೀಸ್ ವೃತ್ತ ನಿರೀಕ್ಷಕರಾಗಿ ಎಚ್. ಆರ್. ಪಾಟೀಲ ಅಧಿಕಾರ ವಹಿಸಿಕೊಂಡರು.



# ಅಕ್ಟೋಬರ್ 23 ರಂದು ಕಿತ್ತೂರು ರಾಣಿ ಚನ್ನಮ್ಮ ಜಯಂತಿ




**ಧಾರವಾಡ :** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಅಕ್ಟೋಬರ್ 23 ರಂದು ಬೆಳಿಗ್ಗೆ 11 ಗಂಟೆಗೆ ಕಿತ್ತೂರು ರಾಣಿ ಚನ್ನಮ್ಮ ಜಯಂತಿಯನ್ನು ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಹೇಳಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಯಂತಿ ಕಾರ್ಯಕ್ರಮವನ್ನು ನಾವೆಲ್ಲರೂ ವಿಜೃಂಭಣೆಯಿಂದ ಪ್ರತಿವರ್ಷದಂತೆ ಆಚರಿಸೋಣ ಎಂದು ತಿಳಿಸಿದರು.

ಕಿತ್ತೂರು ಉತ್ಸವದ ಜ್ಯೋತಿ ರಥಯಾತ್ರೆಯು ಧಾರವಾಡಜಿಲ್ಲೆಗೆಅಕ್ಟೋಬರ್19ರಂದುಬೆಳಿಗ್ಗೆ11:30 ಗಂಟೆಗೆ ಆಗಮಿಸಲಿದ್ದು, ಜಿಲ್ಲಾಧಿಕಾರಿಗಳ ಕಚೇರಿಯ ಮುಂಭಾಗದಲ್ಲಿ ಕಿತ್ತೂರು ಉತ್ಸವ ಜ್ಯೋತಿಯನ್ನು ಜಿಲ್ಲಾಡಳಿತದಿಂದ ಸ್ವಾಗತಿಸಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಭೆಯಲ್ಲಿ ಸಮಾಜದ ಹಿರಿಯ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಹುಬ್ಬಳ್ಳಿ | ದರ ಕುಸಿತ: ಈರುಳ್ಳಿ ಬೆಳೆಗಾರರ ಪ್ರತಿಭಟನೆ



**ಹುಬ್ಬಳ್ಳಿ :** ಈರುಳ್ಳಿ ದರ ಕುಸಿತ ಖಂಡಿಸಿ ಬೆಳೆಗಾರರು ಇಲ್ಲಿನ ಅಮರಗೋಳದ ಎಪಿಎಂಸಿ ದ್ವಾರದ ಎದುರು ಬುಧವಾರ ಪ್ರತಿಭಟನೆ ನಡೆಸಿ, ಎಪಿಎಂಸಿ ಆಡಳಿತ ಕಚೇರಿಗೆ ಮುತ್ತಿಗೆ ಹಾಕಿದರು.

ಹುಬ್ಬಳ್ಳಿ–ಧಾರವಾಡ ಮುಖ್ಯರಸ್ತೆಯಲ್ಲಿ ವಾಹನ ಸಂಚಾರ ತಡೆದು, ರಸ್ತೆಯಲ್ಲಿ ಈರುಳ್ಳಿ ಸುರಿದು ಪ್ರತಿಭಟಿಸಿದರು. ಇದರಿಂದಾಗಿ ಕೆಲಕಾಲ ವಾಹನ ದಟ್ಟಣೆಉಂಟಾಗಿದ್ದರಿಂದವಾಹನ ಸವಾರರು ಪರದಾಡಿದರು.

ಧಾರವಾಡ, ಗದಗ, ಬಾಗಲಕೋಟೆ, ವಿಜಯಪುರ, ಬೆಳಗಾವಿಸೇರಿವಿವಿಧಜಿಲ್ಲೆಗಳಿಂದ ಎಂಟು ಸಾವಿರ ಕ್ವಿಂಟಲ್? ಈರುಳ್ಳಿ ಆವಕವಾಗಿತ್ತು. ಪ್ರತಿ ಕ್ವಿಂಟಲ್?ಗೆ ಕನಿಷ್ಠ ?100 ರಿಂದ ಗರಿಷ್ಠ ?1,500 ಟೆಂಡರ್‌ನಲ್ಲಿ ದರ ನಿಗದಿಯಾಗಿತ್ತು. ವ್ಯಾಪಾರಿಗಳು ತೇವಾಂಶದ ನೆಪವೊಡ್ಡಿ ಕಡಿಮೆ ದರ ನಿಗದಿಪಡಿಸಿದ್ದಾರೆ ಎಂದು ರೈತ ಮುಖಂಡರು ದೂರಿದರು.

ರತ್ನಭಾರತ ರೈತ ಸಮಾಜದ ರಾಷ್ಟ್ರೀಯ ಉಪಾಧ್ಯಕ್ಷ ಹೇಮನಗೌಡ ಬಸನಗೌಡ್ರ, ಎಪಿಎಂಸಿಯಲ್ಲಿ ದಲ್ಲಾಳಿಗಳಿಂದ ರೈತರಿಗೆ ಅನ್ಯಾಯವಾಗುತ್ತಿದ್ದು, ಪ್ರತಿ ಕ್ವಿಂಟಲ್?ಗೆ ಕನಿಷ್ಠ ?2 ಸಾವಿರ ನಿಗದಿಪಡಿಸಬೇಕು ಎಂದು ಒತ್ತಾಯಿಸಿದರು.

ವಿರುಪಾಕ್ಷ ಗಣಿ, ಶಂಕ್ರಪ್ಪ ಕುಂದಗೋಳ, ರಾಜಶೇಖರ ಪಾಟೀಲ, ಸುನೀಲ ಯಲಿಗಾರ, ಲಕ್ಷ್ಮಣಗೌಡ ಶಿವನಗೌಡರ, ಜಡೆಪ್ಪ ಮಡಿವಾಳರ, ಮಂಜುನಾಥ ಮರಿಗೌಡ್ರ, ಪುಂಡಲಿಕ ಮಡಿ ಇದ್ದರು.

# ಸೌತ್ ಇಂಡಿಯಾ ಶಾಪಿಂಗ್ ಮಾಲ್ ಉದ್ಘಾಟಿಸಿದ ನಟಿ ರಚಿತಾ ರಾಮ್



**ಹುಬ್ಬಳ್ಳಿ :** ಇಲ್ಲಿನ ಗೋಕುಲ ರಸ್ತೆಯ ಹೊಸ ವಾಯವ್ಯ ಕೇಂದ್ರ ಬಸ್ ನಿಲ್ದಾಣ ಬಳಿಯಿರುವ ಮಾರ್ವೆಲ್ ಎಕ್ರಾನ್‌ನಲ್ಲಿ ಸೌತ್ ಇಂಡಿಯಾ ಶಾಪಿಂಗ್ ಮಾಲ್‌ನ್ನು ಬುಧವಾರ ನಟಿ ರಚಿತಾ ರಾಮ್ ಅವರು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ಮಾಲ್‌ನಲ್ಲಿನ ವಿವಿಧ ಸೀರೆಗಳನ್ನು ವೀಕ್ಷಿಸಿದರು. ಮಕ್ಕಳ ಮತ್ತು ಪುರುಷರುಉಡುಪಿನವಿಭಾಗಕ್ಕೂ ಭೇಟಿ ನೀಡಿ, ವೈವಿಧ್ಯತೆ ಕಂಡು ಹರ್ಷ ವ್ಯಕ್ತಪಡಿಸಿದರು. ವಿವಿಧ ಬಗೆಯ ಆಕರ್ಷಕ ಬಟ್ಟೆಗಳನ್ನು ಕಂಡು, ಖುಷಿ ಪಟ್ಟರು.

'ಹುಬ್ಬಳ್ಳಿಯಲ್ಲಿ ಮೊದಲ ಬಾರಿಗೆ ಶಾಪಿಂಗ್ ಮಾಲ್ ಆರಂಭಿಸುವ ಮೂಲಕ ಸೌತ್ ಇಂಡಿಯಾ ಶಾಪಿಂಗ್ ಮಾಲ್ ಕರ್ನಾಟಕಕ್ಕೂ ಕಾಲಿಟ್ಟಿದೆ. ಶೀಘ್ರದಲ್ಲಿ ರಾಜ್ಯದಲ್ಲಿ ಇನ್ನು ಐದು ಶಾಪಿಂಗ್ ಮಾಲ್ ಉದ್ಘಾಟಿಸಲಿದ್ದು, ಅವರ ವ್ಯಾಪಾರ ವಹಿವಾಟು ಉನ್ನತ ಮಟ್ಟಕ್ಕೇರಲಿ' ಎಂದು ರಚಿತಾ ರಾಮ್ ಶುಭ ಹಾರೈಸಿದರು.

'ಹಬ್ಬ ಹಾಗೂ ಮದುವೆ ಸೀಸನ್‌ಗೆ ಬೇಕಾದ ವೈವಿಧ್ಯತೆ ಹಾಗೂ ಆಕರ್ಷಕ ವಿನ್ಯಾಸದ, ಉತ್ತಮ ಗುಣಮಟ್ಟದ ಸೀರೆಗಳು ಇಲ್ಲಿವೆ. ಸಾಂಪ್ರದಾಯಿಕ ಹಾಗೂ ಫ್ಯಾನ್ಸಿ ಸೀರೆಗಳು, ಮಕ್ಕಳು ಮತ್ತು ಪುರುಷರಿಗೆ ಬೇಕಾದ ಉಡುಪುಗಳು ಲಭ್ಯ ಇವೆ. ಒಂದೇ ಕಡೆ ಎಲ್ಲ ರೀತಿ ಬಟ್ಟೆಗಳು ಸಿಗುತ್ತವೆ. ಸಾವಿರಕ್ಕಿಂತ ಹೆಚ್ಚು ವಿಶೇಷ ಕೊಡುಗೆಗಳಿದ್ದು, ದರವೂ ಕೈಗೆಟಕುವಂತಿದೆ' ಎಂದರು.

ಮಾಲ್‌ನ ಅಧ್ಯಕ್ಷ ಪೊಟ್ಟಿ ವೆಂಕಟೇಶ್ವರಲು ಮಾತನಾಡಿ, '35ನೇ ಮಳಿಗೆಯೊಂದಿಗೆ ಕರ್ನಾಟಕಕ್ಕೂ ಸೌತ್ ಇಂಡಿಯಾ ಶಾಪಿಂಗ್‌ಮಾಲ್‌ಕಾಲಿಟ್ಟಿರುವುದು ಹೆಮ್ಮೆಯ ವಿಷಯ. ದಕ್ಷಿಣ ಭಾರತದ ಸಂಸ್ಕೃತಿ ಬಿಂಬಿಸುವ ಬಟ್ಟೆಗಳು ಇಲ್ಲಿವೆ' ಎಂದರು.

ಮಾಲ್‌ನ ವ್ಯವಸ್ಥಾಪಕ ನಿರ್ದೇಶಕ ಸೀರ್ನಾ ರಾಜಮೌಳಿ ಮಾತನಾಡಿ, 'ಹಬ್ಬ,ಮದುವೆಮತ್ತುಕುಟುಂಬದ ಶಾಪಿಂಗ್ ಮಾಡಬಹುದಾದ ಮಾಲ್ ಇದಾಗಿದೆ' ಎಂದರು.

ಬೆಳಿಗ್ಗೆಯಿಂದಲೇ ಮಾಲ್ ಎದುರು ಅಭಿಮಾನಿಗಳು ಜಮಾಯಿಸಿದ್ದ ಅಭಿಮಾನಿಗಳ ಕೈ ಕುಲುಕಿದ ರಚಿತಾ ರಾಮ್ ಅವರು, ನಂತರ ಸೆಲ್ಫಿಗಳನ್ನುಕ್ಲಿಕ್ಕಿಸಿಕೊಂಡು ಸಂಭ್ರಮಿಸಿದರು.

# ನೈರುತ್ಯ ರೈಲ್ವೆ: ಅನಂತ್ ಹೆಚ್ಚುವರಿ ಪ್ರಧಾನ ವ್ಯವಸ್ಥಾಪಕ



**ಹುಬ್ಬಳ್ಳಿ :** ನೈರುತ್ಯ ರೈಲ್ವೆಯ ನೂತನ ಹೆಚ್ಚುವರಿ ಪ್ರಧಾನ ವ್ಯವಸ್ಥಾಪಕರಾಗಿ ಪಿ.ಅನಂತ್ ಅವರು ಈಚೆಗೆ ಅಧಿಕಾರ ವಹಿಸಿಕೊಂಡರು. ನವದೆಹಲಿಯ ರೈಲ್ವೆ ಮಂಡಳಿಯ ಹೆಚ್ಚುವರಿ ಸದಸ್ಯರಾಗಿ ವರ್ಗಾವಣೆಗೊಂಡಿರುವ ಎ.ಕೆ.ಜೈನ್ ಅವರ ಸ್ಥಾನಕ್ಕೆ ಅನಂತ್ ಅವರು ನಿಯೋಜನೆಗೊಂಡಿದ್ದಾರೆ.

ಭಾರತೀಯ ರೈಲ್ವೆ ಮೆಕ್ಯಾನಿಕಲ್ ಎಂಜಿನಿಯರ್‌ಗಳ ಸೇವೆಯ 1989ನೇ ಸಾಲಿನ ಬ್ಯಾಚ್‌ನ ಅಧಿಕಾರಿಯಾಗಿರುವ ಅವರು, ಮೆಕ್ಯಾನಿಕಲ್ ಎಂಜಿನಿಯರಿಂಗ್‌ನಲ್ಲಿ ಪದವಿ ಪಡೆದಿದ್ದಾರೆ.

ಭಾರತೀಯ ರೈಲ್ವೆಯಲ್ಲಿ ಮೂರು ದಶಕಗಳಿಗೂ ಹೆಚ್ಚು ಕಾಲ ವಿವಿಧ ಹುದ್ದೆಗಳನ್ನು ನಿಭಾಯಿಸಿದ್ದಾರೆ. 2002 ರಿಂದ 2008 ರವರೆಗೆ ರೈಲ್ವೆ ಮಂಡಳಿಯಲ್ಲಿ (ಮಾನವಶಕ್ತಿ ಯೋಜನೆ) ನಿರ್ದೇಶಕರಾದ್ದರು. 2012 ರಿಂದ 2017 ರವರೆಗೆ ಬನಾರಸ್ ಲೋಕೊಮೋಟಿವ್ ವರ್ಕ್ಸ್‌ನಲ್ಲಿ ಮುಖ್ಯ ಮೆಕ್ಯಾನಿಕಲ್ ಎಂಜಿನಿಯರ್ ಆಗಿ ಕಾರ್ಯನಿರ್ವಹಿಸಿದ್ದಾರೆ.

2017ರಿಂದ ನವದೆಹಲಿಯ ರೈಲ್ವೆ ಮಾಹಿತಿ ವ್ಯವಸ್ಥೆಗಳ ಕೇಂದ್ರದಲ್ಲಿ ಕೋಚ್ ನಿರ್ವಹಣಾ ವ್ಯವಸ್ಥೆಯ ಪ್ರಧಾನ ವ್ಯವಸ್ಥಾಪಕರಾಗಿದ್ದ ಅವರು, ಮಿಷನ್–ಕ್ರಿಟಿಕಲ್ ಅಪ್ಲಿಕೇಷನ್ ಸಾಫ್ಟ್‌ವೇರ್ ಅಭಿವೃದ್ಧಿ ಮತ್ತು ಅನುಷ್ಠಾನದಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. 2021ರಿಂದ 2023ರವರೆಗೆ ದಕ್ಷಿಣ ರೈಲ್ವೆಯ ಮಧುರೆ ವಿಭಾಗದ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾಗಿ ಸೇವೆ ಸಲ್ಲಿಸಿದ್ದಾರೆ.

## ಪಾರ್ವತಮ್ಮ ಕಳಕಪ್ಪ ಗೊಣ್ಣಾಗರ ನಿಧನ



**ಹುನಗುಂದ :** ತಾಲೂಕಿನ ಬನ್ನಿಹಟ್ಟಿ ಗ್ರಾಮದ ಶ್ರೀಮತಿ ಪಾರ್ವತಮ್ಮ ಕಳಕಪ್ಪ ಗೊಣ್ಣಾಗರ (88) ಇವರು ದಿನಾಂಕ 20–10.2025 ರಂದು ಬನ್ನಿಹಟ್ಟಿಯಲ್ಲಿ ನಿಧನರಾಗಿದ್ದಾರೆ. ಮೃತರ ಅಂತ್ಯಕ್ರಿಯೆಯು ದಿನಾಂಕ 21.10.2025 ರಂದು ಬೆಳಿಗ್ಗೆ 10 ಗಂಟೆಗೆ ಬನ್ನಿಹಟ್ಟಿಯಲ್ಲಿ ನೆರವೇರುವುದು... ಇವರು ಶ್ರೀ ಶರಣಪ್ಪ ಕಳಕಪ್ಪ ಗೊಣ್ಣಾಗರ ಇವರ ತಾಯಿಯವರು.

# ಅಧಿಕಾರಿಗಳ ಸಭೆ



**ಧಾರವಾಡ:** ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಧ್ಯಕ್ಷರ ಅಧ್ಯಕ್ಷತೆಯಲ್ಲಿನಡೆದಉನ್ನತಮಟ್ಟದಅಧಿಕಾರಿಗಳ ಸಭೆ ಶ್ರೀಮತಿ ಶಿವಲೀಲಾ ವಿನಯ ಕುಲಕರ್ಣಿ ಅಧ್ಯಕ್ಷರು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ(ಕ.ನ.ನೀ.ಸ ಮತ್ತು ಒ.ಚ ಮಂಡಳಿ) ಅವರ ಅಧ್ಯಕ್ಷತೆಯಲ್ಲಿ ಮಂಡಳಿಯ ಸಭಾಂಗಣದಲ್ಲಿ ನಡೆಯಿತು.

ಮಂಡಳಿಯ ಬಗ್ಗೆ ಪರಿಚಯ:ಮಂಡಳಿಯ ವ್ಯವಸ್ಥಾಪಕ ನಿರ್ದೇಶಕರು ಮಂಡಳಿಯ ರಚನೆ, ಉದ್ದೇಶ, ಕಾರ್ಯಪದ್ಧತಿ, ಹೊಣೆಗಾರಿಕೆಗಳು, ವ್ಯಾಪ್ತಿ ಹಾಗೂಪ್ರಸ್ತುತಯೋಜನೆಗಳ ಸ್ಥಿತಿಗತಿ ಕುರಿತು ಅಧ್ಯಕ್ಷರಿಗೆ ವಿವರಿಸಿದರು.

ಪ್ರಸ್ತುತಯೋಜನೆಗಳ ಸ್ಥಿತಿ:ಸಭೆಯಲ್ಲಿ ಮಂಡಳಿಯುಪ್ರಸ್ತುತಕಾರ್ಯಗತಗೊಳಿಸುತ್ತಿರುವ ಯೋಜನೆಗಳವಿವರಗಳನ್ನುಮಂಡಿಸಲಾಯಿತು.

# ದೂರು ನೀಡಲು ಬಂದವರ ಮೇಲೆ ಹಲ್ಲೆ; ಕುಕನೂರು ಪಿ.ಎಸ್.ಐ ಗುರುರಾಜ ಅಮಾನತು



**ಕುಕನೂರು :** ದಂಪತಿ ಕಲಹದ ಕುರಿತು ದೂರು ನೀಡಲು ಬಂದಾಗ ದೂರುದಾರನ ಮೇಲೆಯೇ ಹಲ್ಲೆ ಮಾಡಿದ ಕಾರಣಕ್ಕಾಗಿ ಜಿಲ್ಲೆಯ ಕುಕನೂರು ಪೊಲೀಸ್ ಠಾಣೆಯ ಸಬ್ ಇನ್‌ಸ್ಪೆಕ್ಟರ್ ಗುರುರಾಜ್ ಟಿ. ಅವರನ್ನುಅಮಾನತುಮಾಡಲಾಗಿದೆ.

ಕೊಪ್ಪಳತಾಲ್ಲೂಕಿನಯಲಮಗೇರಿಯ ಗಾಳೆಪ್ಪ ಹಿರೇಮನಿ ಎಂಬುವವರು ದೂರು ನೀಡಿ ಜಗಳ ಪರಿಹರಿಸಲು ಬಂದ ನನ್ನ ಮೇಲೆ ಹಲ್ಲೆ ಮಾಡಿ ಕುಕನೂರು ಪಿಎಸ್‌ಐ ದೌರ್ಜನ್ಯ ಎಸಗಿದ್ದಾರೆ' ಎಂದು ಆರೋಪಿಸಿದ್ದರು.

ಇದಕ್ಕಾಗಿ ದಲಿತ ಸಮುದಾಯದ ಮುಖಂಡರು ಠಾಣೆ ಎದುರು ತಡರಾತ್ರಿತನಕ ಪ್ರತಿಭಟನೆ ನಡೆಸಿ ಅಮಾನತು ಮಾಡುವ ತನಕ ಹೋರಾಟ ನಿಲ್ಲಿಸುವುದಿಲ್ಲ ಎಂದು ಪಟ್ಟು ಹಿಡಿದಿದ್ದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ ಹಾಗೂ ದೂರುದಾರನ ಜೊತೆ ಬಳ್ಳಾರಿ ಐಜಿಪಿ ವರ್ತಿಕಾ ಕಟಿಯಾರ್ ದೂರವಾಣಿಯಲ್ಲಿ ಮಾತನಾಡಿ ಪಿಎಸ್‌ಐ ವಿರುದ್ಧ ಕ್ರಮದ ಭರವಸೆ ನೀಡಿದ್ದರು.

ತಡರಾತ್ರಿ ಆದೇಶ ಹೊರಡಿಸಿರುವ ಎಸ್.ಪಿ. ಅರಸಿದ್ದಿ 'ಸಾರ್ವಜನಿಕರು ದೂರು ನೀಡಲು ಬಂದಾಗ ಅವರೊಂದಿಗೆ ಸೌಜನ್ಯದೊಂದಿಗೆ ವರ್ತಿಸಬೇಕಿತ್ತು. ಸಿಟ್ಟಿನ ಭರದಲ್ಲಿ ದೂರುದಾರ ಗಾಳೆಪ್ಪ ಅವರನ್ನು ತಳ್ಳಾಡಿ ಹೊಡೆದು ಅನುಚಿತವಾಗಿ ನಡೆದುಕೊಂಡಿದ್ದು ಸರಿಯಲ್ಲ.

ಆದ್ದರಿಂದ ಸೇವೆಯಿಂದ ಅಮಾನತು ಮಾಡಲಾಗಿದೆ' ಎಂದು ಆದೇಶದಲ್ಲಿ ತಿಳಿಸಿದ್ದಾರೆ.

# ದರ ಕುಸಿತ: ಈರುಳ್ಳಿ ಬೆಳೆಗಾರರು ಕಂಗಾಲು



**ಅಳವಂಡಿ :** ಹೋಬಳಿ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಈರುಳ್ಳಿ ಬೆಳೆಗಾರರು ಬೆಲೆ ಕುಸಿತ ಹಾಗೂ ಅತಿವೃಷ್ಟಿಯಿಂದ ನಲುಗುತ್ತಿದ್ದಾರೆ.

ಈರುಳ್ಳಿಬೆಳೆಯುಮಳೆಯಿಂದಹಾಳಾಗಿದ್ದು, ಇನ್ನೂ ಬೆಲೆ ಕುಸಿತ ಪರಿಣಾಮ ಕೆಲವು ರೈತರು ತಮ್ಮ ಜಮೀನಿಗೆ ಕುರಿಗಳನ್ನು ಬಿಟ್ಟು ಮೇಯಿಸುತ್ತಿದ್ದಾರೆ. ಕೆಲವರು ಟ್ರ್ಯಾಕ್ಟರ್ ಮೂಲಕ ನಾಶ ಪಡಿಸುತ್ತಿದ್ದಾರೆ. ಅತಿವೃಷ್ಟಿಯಿಂದ ತೇವಾಂಶ ಹೆಚ್ಚಾಗಿ ಬೆಳೆಯು ಕೊಳೆಯುತ್ತಿದ್ದು, ಇಳುವರಿಯೂ ಸಾಕಷ್ಟು ಕುಸಿದಿದೆ.

ಕಳೆದ ವರ್ಷ ಈರುಳ್ಳಿಗೆ ಉತ್ತಮ ಬೆಲೆ ಇತ್ತು. ಈವರ್ಷವೂ ಉತ್ತಮ ಬೆಲೆ ಸಿಗಬಹುದು ಎಂಬ ನಿರೀಕ್ಷೆಯಿಂದ ಹೋಬಳಿ ವ್ಯಾಪ್ತಿಯ ಅನೇಕ ಗ್ರಾಮಗಳಲ್ಲಿ ರೈತರು ಈರುಳ್ಳಿ ಬೆಳೆದಿದ್ದಾರೆ. ಆರಂಭದಲ್ಲಿ ಚೆನ್ನಾಗಿ ಬೆಳೆದ ಬೆಳೆ ನಂತರ ಸುರಿದ ಮಳೆಯಿಂದ ಹಾಳಾಗಿದೆ. ಇದೀಗ ಉಳಿದ ಬೆಳೆಯನ್ನಾದರೂ ಕೊಯ್ಲು ಮಾಡಿ ಮಾರಾಟ ಮಾಡಬೇಕು ಎಂದರೆ ಬೆಲೆ ಕುಸಿದಿದ್ದು, ರೈತರನ್ನು ಕಂಗಡಿಸಿದೆ.

ಬೀಜ, ಕ್ರಿಮಿನಾಶಕ, ಗೊಬ್ಬರ ಹಾಗೂ ಕೃಷಿ ಚಟುವಟಿಕೆ ಸೇರಿದಂತೆ ರೈತರು ಈರುಳ್ಳಿ ಬೆಳೆಯಲು ಪ್ರತಿ ಎಕರೆಗೆ ಕನಿಷ್ಠ 40 ಸಾವಿರದಿಂದ 50 ಸಾವಿರ ಖರ್ಚು ಮಾಡಿದ್ದಾರೆ. ಮಾರುಕಟ್ಟೆಯಲ್ಲಿ ಈರುಳ್ಳಿ ಬೆಲೆ ಕುಸಿತದ ಪರಿಣಾಮದಿಂದಾಗಿ ಬೆಳೆಗಾರರು ಸಂಕಷ್ಟಕ್ಕೆ ಸಿಲುಕಿದಂತಾಗಿದೆ' ಎಂದು ಬೇಳೂರು ಗ್ರಾಮದ ರೈತರೊಬ್ಬರು ತಿಳಿಸಿದರು.

> ದರ ಕುಸಿತದಿಂದಾಗಿ ಈರುಳ್ಳಿ ಬೆಳೆದ ಬೆಳೆಗಾರರು ಕಂಗಲಾಗಿದ್ದು ಕೂಡಲೇ ಸರ್ಕಾರ ಈರುಳ್ಳಿ ಬೆಳೆಗೆ ಬೆಂಬಲ ಬೆಲೆ ಘೋಷಣೆ ಮಾಡುವ ಮೂಲಕ ರೈತರ ನೆರವಿಗೆ ಬರಬೇಕು.
>
> **–ಗಾಳೆಪ್ಪ ಸುಣಗಾರ, ರೈತ ಮುಖಂಡ ಬೇಳೂರು**

ಅತಿವೃಷ್ಟಿಯಿಂದಾಗಿಬೆಳೆಅಲ್ಪಪ್ರಮಾಣದಲ್ಲಿ ಬಂದಿದೆ. ಪ್ರತಿ ಎಕರೆಗೆ ಸಾವಿರಾರು ರೂಪಾಯಿ ಖರ್ಚು ಮಾಡಿದರೂ, ಮಾರುಕಟ್ಟೆಯಲ್ಲಿ 50 ಕೆಜಿ ಇರುವ ಈರುಳ್ಳಿಗೆ ?150 ರಿಂದ ?200 ಕೇಳುತ್ತಾರೆ. ಕಷ್ಟ ಪಟ್ಟು ಸಾಕಷ್ಟು ಶ್ರಮವಹಿಸಿ ಈರುಳ್ಳಿ ಬೆಳೆದ ಬೆಳೆಗಾರರಿಗೆ ದಿಕ್ಕು ತೋರದಂತಾಗಿದೆ.

> ಪ್ರತಿ ಎಕರೆಗೆ ಸಾವಿರಾರು ರೂಪಾಯಿ ಖರ್ಚು ಮಾಡಿ ಈರುಳ್ಳಿ ಬೆಳೆದ ರೈತರು ಮಾರುಕಟ್ಟೆಯಲ್ಲಿ ಈರುಳ್ಳಿಗೆ ಸೂಕ್ತ ಬೆಲೆ ಇಲ್ಲದಂತಾಗಿದೆ. ಜಮೀನಿನಲ್ಲಿ ರೈತರು ಕುರಿ ಮೇಯಿಸುವುದು ಹಾಗೂ ಬೆಳೆ ನಾಶ ಪಡಿಸುತ್ತಿದ್ದೇವೆ
>
> **–ನಿಂಗಪ್ಪ ಇಡಗಲ್, ಈರುಳ್ಳಿ ಬೆಳೆದ ರೈತ**

ಕೊನೆಯ ಪಕ್ಷ ಖರ್ಚು ಮಾಡಿದ ಅಸಲು ಕೂಡ ರೈತರಿಗೆ ಸಿಗದ ಪರಿಸ್ಥಿತಿ ಇದೆ. ಹಾಗಾಗಿ ಕೂಡಲೇ ಸರ್ಕಾರ ಈರುಳ್ಳಿ ಬೆಳೆದು ಅತಿವೃಷ್ಟಿಯಿಂದ ಹಾಳಾದ ಬೆಳೆದ ಪರಿಹಾರ ಜೊತೆಗೆ ಬೆಂಬಲ ಬೆಲೆ ಘೋಷಣೆ ಮಾಡಬೇಕು' ಎನ್ನುತ್ತಾರೆ ರೈತ ಮುಖಂಡ ಗಾಳೆಪ್ಪ ಸುಣಗಾರ.

# ಲಸಿಕೆಯಿಂದ ಮಗು ವಂಚಿತವಾಗದಂತೆ ನೋಡಿಕೊಳ್ಳಿ: ಇಟ್ನಾಳ



**ಕೊಪ್ಪಳ :** 'ಮಗುವಿನ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಲು ಮತ್ತು ನಿಗದಿತ ಸಮಯಕ್ಕೆ ಲಸಿಕೆ ಹಾಕುವಂತೆ ಸ್ಥಳೀಯವಾಗಿ ಕಾರ್ಯನಿರ್ವಹಿಸುವ ಆಶಾ ಕಾರ್ಯಕರ್ತೆಯರು, ಆರೋಗ್ಯ ಕಾರ್ಯಕರ್ತರು ಪೋಷಕರಿಗೆ ಸೂಕ್ತ ಸಮಯದಲ್ಲಿ ತಿಳಿವಳಿಕೆ ಮೂಡಿಸಲು ಕ್ರಮಕೈಗೊಳ್ಳಬೇಕು' ಎಂದು ಜಿಲ್ಲಾಧಿಕಾರಿ ಸುರೇಶ ಇಟ್ನಾಳ ಅಧಿಕಾರಿಗಳಿಗೆ ಹೇಳಿದರು.

ಸೋಮವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಜಿಲ್ಲಾಮಟ್ಟದಜಾಗೃತಿಸಮಿತಿಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ 'ಮಗುವಿಗೆ ಕಾಲಕಾಲಕ್ಕೆ ಹಾಕಬೇಕಾದ ಕಡ್ಡಾಯ ಲಸಿಕೆಗಳು, ಮಗುವಿನ ಬೆಳವಣಿಗೆಯ ವಿವಿಧ ಹಂತಗಳಲ್ಲಿ ಹಾಕಬೇಕಾದ ಲಸಿಕೆಗಳ ಬಗ್ಗೆ ಪ್ರತಿಯೊಬ್ಬ ತಾಯಂದಿರಿಗೆ ಗೊತ್ತಿರಬೇಕು. ಇದಕ್ಕೆ ಅವರಲ್ಲಿ ಜಾಗೃತಿ ಮೂಡಿಸಬೇಕು' ಎಂದರು.

ಜಿಲ್ಲಾ ಪಂಚಾಯಿತಿ ಸಿಇಒ ವರ್ಣಿತ್ ನೇಗಿ, ಡಿಎಚ್‌ಒ ಡಾ.ಲಿಂಗರಾಜು ಟಿ., ಎಸ್.ಎಂ.ಒ ಡಾ.ಶ್ರೀಧರ್, ಡಿಡಿಪಿಐ ಸೋಮಶೇಖರಗೌಡ ಪಾಟೀಲ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ರವೀಂದ್ರನಾಥ ಎಂ.ಎಚ್., ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ನಂದಕುಮಾರ್ ಸೇರಿ ಇತರ ಅಧಿಕಾರಿಗಳು ಹಾಜರಿದ್ದರು.

# 'ಉದ್ಯೋಗಾಕಾಂಕ್ಷಿಗಳಿಗೆ ಕೌಶಲ ಅವಶ್ಯಕ'




**ಯಲಬುರ್ಗಾ :** 'ವಾಣಿಜ್ಯ ಪದವೀಧರರಿಗೆ ಸಾಕಷ್ಟು ಉದ್ಯೋಗ ಅವಕಾಶಗಳಿದ್ದು, ಪ್ರಸ್ತುತ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿಶೇಷ ಕೌಶಲಗಳನ್ನು ರೂಢಿಸಿಕೊಂಡರೆ ದೊಡ್ಡ ದೊಡ್ಡ ಹುದ್ದೆಗಳನ್ನು ಅಲಂಕರಿಸಿಕೊಳ್ಳಬಹುದು' ಎಂದು ಕುಷ್ಟಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಭೋಜರಾಜ ಹೇಳಿದರು.ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯ ವಿಭಾಗದಲ್ಲಿ ಹಮ್ಮಿಕೊಂಡಿದ್ದ ಪ್ರಥಮ ವರ್ಷದ ವಿದ್ಯಾರ್ಥಿಗಳ ಆಗಮನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಭವಿಷ್ಯ ರೂಪಿಸಿಕೊಳ್ಳಲು ಬೇಕಾದ ಅಗತ್ಯತೆಗಳು ಪದವಿ ಹಂತದಲ್ಲಿಯೇ ದೊರೆಯುತ್ತವೆ. ಬಹು ವಿಭಾಗಗಳಲ್ಲಿ ಕಾರ್ಯನಿರ್ವಹಿಸಲು ಪದವಿ ವಿದ್ಯಾರ್ಹತೆಯೇ ಮಾನದಂಡವಾಗಿರುವುದರಿಂದ ಕಲಿಕೆಯು ಹೆಚ್ಚು ಪರಿಣಾಮಕಾರಿ ಆಗಿರಬೇಕು' ಎಂದರು.

ಯಲಬುರ್ಗಾ ವಕೀಲರ ಸಂಘದ ಕಾರ್ಯದರ್ಶಿ ಮಹಾಂತೇಶ ಟಿ.,ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಕೆ.ಎಚ್. ಛತ್ರದ್ ಮಾತನಾಡಿದರು.

ವಾಣಿಜ್ಯ ವಿಭಾಗದ ಸಹ ಪ್ರಾಧ್ಯಾಪಕ ಎ.ಬಿ. ಕೆಂಚರಡ್ಡಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕ ಶಂಕ್ರಯ್ಯ ಅಬ್ಬಿಗೇರಿಮಠ ಸೇರಿ ಅನೇಕರು ಮಾತನಾಡಿದರು. ಸಹಾಯಕ ಪ್ರಾಧ್ಯಾಪಕರಾದ ವಿನೋದ ಸಿದ್ದಣ್ಣನವರ, ಶಶಿಕುಮಾರ, ಹನಿಮೇಶ, ಮಂಜುಳಾ ಮಡಿವಾಳರ, ಲಕ್ಷ್ಮಿಬಾಯಿ, ವಂಶಿಕೃಷ್ಣ, ರಾಜಶೇಖರ ಕಲಕಬಂಡಿ ಇದ್ದರು.

ಮಾನಸ ಮತ್ತು ಮಲ್ಲಮ್ಮ ನಿರೂಪಿಸಿದರು. ಸಂಗಮೇಶಮತ್ತುವಿನೋದಸ್ವಾಗತಿಸಿದರು.

# 'ಬೀಜೋಪಚಾರ ಮಾಡಿ ಬಿತ್ತಿ'



**ಅಳವಂಡಿ :** ರೈತ ಸಂಪರ್ಕ ಕೇಂದ್ರದಲ್ಲಿ ಹಿಂಗಾರು ಹಂಗಾಮಿಗೆ ರೈತರಿಗೆ ಬಿತ್ತನೆಗೆ ಬೇಕಾದ ಕಡಲೆ, ಜೋಳ ಬಿತ್ತನೆ ಬೀಜಗಳ ಸಂಗ್ರಹ ಇದೆ ಎಂದು ಕೃಷಿ ಅಧಿಕಾರಿ ಪ್ರತಾಪಗೌಡ ನಂದನಗೌಡ ಹೇಳಿದರು.

ಗ್ರಾಮದ ರೈತ ಸಂಪರ್ಕ ಕೇಂದ್ರದಲ್ಲಿ ಹಿಂಗಾರು ಹಂಗಾಮಿನ ಬಿತ್ತನೆ ಬೀಜಗಳನ್ನು ವಿತರಿಸಿ ಸೋಮವಾರ ಮಾತನಾಡಿದರು.

ರೈತರು ಜಮೀನು ಹದಗೊಳಿಸಿ ಬೀಜಗಳಿಗೆ ಬೀಜೋಪಚಾರ ಮಾಡಿ ಬಿತ್ತನೆ ಮಾಡಬೇಕು. ಇದರಿಂದ ಬೆಳೆಗಳಿಗೆ ರೋಗ ಬಾಧೆ ಕಡಿಮೆ ಆಗಲಿದೆ. ರೈತ ಸಂಪರ್ಕ ಕೇಂದ್ರದಲ್ಲಿ ಬಿತ್ತನೆ ಬೀಜಗಳು ಸರ್ಕಾರದ ಸಹಾಯಧನದ ಯೋಜನೆಯಡಿ ಸಿಗುತ್ತವೆ. ರೈತರು ಇದರ ಉಪಯೋಗ ಪಡೆದುಕೊಳ್ಳಬೇಕು ಎಂದರು.

ಈ ವೇಳೆ ಶಂಕರಪ್ಪ, ಸಿದ್ದು, ವಿಶ್ವ, ಗವಿಸಿದ್ದಪ್ಪ, ನೀಲಪ್ಪ ಹಕ್ಕಂಡಿ ಇತರರು ಇದ್ದರು.

# ಚನ್ನಮ್ಮ ಜಯಂತಿ: ಅಗತ್ಯ ಸಿದ್ಧತೆಗೆ ಸೂಚನೆ

**ಕೊಪ್ಪಳ:** ಜಿಲ್ಲಾಡಳಿತ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನಡೆಯಲಿರುವ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು.

ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ 'ಸಮಾಜದ ಮುಖಂಡರ ಕೋರಿಕೆ ಮೇರೆಗೆ ಜಯಂತಿಯನ್ನು ಅಕ್ಟೋಬರ್ 23ರ ಬದಲಿಗೆ ನವೆಂಬರ್ 3ರಂದು ಜಿಲ್ಲಾ ಕೇಂದ್ರದಲ್ಲಿ ವಿಜೃಂಭಣೆಯಿಂದ ಆಚರಿಸಲಾಗುತ್ತದೆ.

ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ಅಧಿಕಾರಿಗಳು ಕೆಲಸ ಮಾಡಬೇಕು' ಎಂದು ನಿರ್ದೇಶನ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧಿಕಾರಿ ಹಿರೇಮಠ, ಡಿಡಿಪಿಯು ಜಗದೀಶ್, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕಿ ಪುಷ್ಪಲತಾ, ಆರೋಗ್ಯ ಇಲಾಖೆಯ ಶಿವಾನಂದ ಪೂಜಾರ, ಪಂಚಮಸಾಲಿ ಸಮಾಜದ ರಾಜ್ಯ ಅಧ್ಯಕ್ಷ ಸೋಮನಗೌಡ ಪಾಟೀಲ, ತಾಲ್ಲೂಕು ಅಧ್ಯಕ್ಷ ಕರಿಯಪ್ಪ ಮೇಟಿ, ಮುಖಂಡರಾದ ದೇವರಾಜ ಹಾಲಸಮುದ್ರ, ಮಲ್ಲಿಕಾರ್ಜುನ ಎಸ್., ಶರಣಪ್ಪ ಶೀಲವಂತರ ಇತರರು ಪಾಲ್ಗೊಂಡಿದ್ದರು.

# ದೂರುದಾರರ ಮೇಲೆ ಹಲ್ಲೆ: ಪಿಎಸ್‌ಐ ಅಮಾನತು




**ಕುಕನೂರು :** ದೂರು ನೀಡಲು ಬಂದಾತನ ಮೇಲೆಯೇ ಹಲ್ಲೆ ಮಾಡಿದ್ದ ಆರೋಪದಡಿ ಜಿಲ್ಲೆಯ ಕುಕನೂರು ಠಾಣೆಯ ಸಬ್ ಇನ್‌ಸ್ಪೆಕ್ಟರ್ ಗುರುರಾಜ್ ಟಿ. ಅವರನ್ನು ಅಮಾನತು ಮಾಡಲಾಗಿದೆ.

ದಲಿತ ಸಮುದಾಯದ ಮುಖಂಡರು ಮಂಗಳವಾರ ತಡರಾತ್ರಿ ತನಕ ಠಾಣೆ ಎದುರು ಪ್ರತಿಭಟಿಸಿದ್ದು, ಪಿಎಸ್‌ಐ ಅಮಾನತು ತನಕ ಹೋರಾಟ ನಿಲ್ಲಿಸುವುದಿಲ್ಲ' ಎಂದು ಪಟ್ಟು ಹಿಡಿದಿದ್ದರು.

ನನ್ನ ಮೇಲೆ ಹಲ್ಲೆ ಮಾಡಿ ಪಿಎಸ್‌ಐ ದೌರ್ಜನ್ಯ ಎಸಗಿದ್ದಾರೆ' ಎಂದು ಕೊಪ್ಪಳ ತಾಲ್ಲೂಕಿನ ಯಲಮಗೇರಿಯ ಗಾಳೆಪ್ಪ ಹಿರೇಮನಿ ದೂರು ನೀಡಿದ್ದರು.

ಬಳಿಕ ಬಳ್ಳಾರಿ ವಲಯದ ಐಜಿಪಿ ವರ್ತಿಕಾ ಕಟಿಯಾರ್ ಜೊತೆ ದೂರವಾಣಿ ಮೂಲಕ ಚರ್ಚಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಅಮಾನತು ಆದೇಶ ಹೊರಡಿಸಿದರು.

# ಕಂಟೇನರ್ ಲಾರಿ ಡಿಕ್ಕಿ, ಬೈಕ್ ಸವಾರ ಸಾವು



**ಕುಷ್ಟಗಿ :** ತಾಲ್ಲೂಕಿನ ವಣಗೇರಾ ಸೀಮಾಂತರದ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಂಟೇನರ್ ಲಾರಿ ಡಿಕ್ಕಿಯಿಂದ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಬುಧವಾರ ನಡೆದಿದೆ.

ತಾಲ್ಲೂಕಿನ ಕೆ.ಬೋದೂರು ಗ್ರಾಮದ ಅಮರೇಶ ಗದ್ದೆಪ್ಪ ವಣಗೇರಿ (26) ಮೃತರು.

ಗ್ರಾಮಕ್ಕೆ ಹೊರಟಿದ್ದ ಬೈಕ್‌ಗೆ ಡಿಕ್ಕಿ ಹೊಡೆದ ಲಾರಿ ಸುಮಾರು ಇಪ್ಪತ್ತು ಅಡಿವರೆಗೂ ಸವಾರನ ದೇಹವನ್ನು ಎಳೆದೊಯ್ದಿದ್ದು ಕಂಡುಬಂತು. ಘಟನೆ ನಂತರ ಲಾರಿ ಚಾಲಕ ಪರಾರಿಯಾಗಿದ್ದಾನೆ ಎಂದು ಮೂಲಗಳು ತಿಳಿಸಿವೆ.

ಲಾರಿ ಚಾಲಕ ಪಾನಮತ್ತನಾಗಿದ್ದ ಎಂದು ಸ್ಥಳದಲ್ಲಿದ್ದ ಪ್ರತ್ಯಕ್ಷದರ್ಶಿಗಳು ತಿಳಿಸಿದರು.

ಮೃತನ ತಂದೆ ಗದ್ದೆಪ್ಪ ನೀಡಿದ ದೂರಿನ ಅನ್ವಯ ಇಲ್ಲಿಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪ್ರಿಯಾಂಕ್ ಖರ್ಗೆ ಜೋಕರ್: ಶಾಸಕ ಜನಾರ್ದನ ರೆಡ್ಡಿ

**ಕೊಪ್ಪಳ :** ಆರ್‌ಎಸ್‌ಎಸ್ ವಿಷಯವನ್ನು ಕೆದಕಿ ಸಚಿವ ಪ್ರಿಯಾಂಕ್ ಖರ್ಗೆ ಜೋಕರ್ ಆಗಿದ್ದಾರೆ ಎಂದು ಶಾಸಕ ಜನಾರ್ದನ ರೆಡ್ಡಿ ಹೇಳಿದರು.

ತಾಲ್ಲೂಕಿನ ಮೆತಗಲ್‌ನಲ್ಲಿ ಬುಧವಾರ ಸುದ್ದಿಗಾರರ ಜೊತೆ ಮಾತನಾಡಿ ನಮ್ಮ ಪಕ್ಷದ ಹಿರಿಯರೆಲ್ಲ ಈ ವಿಷಯ ಮಾತಾಡಿದ್ದಾರೆ. ಪ್ರಿಯಾಂಕ್ ಖರ್ಗೆಗೆ ಏನು ಮಾತನಾಡಬೇಕು, ಮಾತನಾಡಬಾರದು ಎನ್ನುವುದೇ ಗೊತ್ತಿಲ್ಲ. ದೇಶದ ಸುರಕ್ಷತೆಗೆ, ಹುಟ್ಟಿರುವ ಮಗುವಿಗೆ ಸಂಸ್ಕಾರ ಕಲಿಸುವ ರಾಷ್ಟ್ರೀಯ ಮಟ್ಟದ ಸಂಸ್ಥೆ ಆರ್‌ಎಸ್‌ಎಸ್ ಬಗ್ಗೆ ಪ್ರಿಯಾಂಕ್ ಮಾತನಾಡುತ್ತಿದ್ದಾರೆ. ರಾಹುಲ್ ಗಾಂಧಿ ಹಾಗೂ ಸೋನಿಯಾ ಗಾಂಧಿ ಅವರನ್ನು ಮೆಚ್ಚಿಸಲು ಈ ರೀತಿಯ ಹೇಳಿಕೆ ನೀಡುತ್ತಿದ್ದಾರೆಯೇ' ಎಂದು ಪ್ರಶ್ನಿಸಿದರು.



ರಾಜ್ಯದಲ್ಲಿ ಜನರಿಗೆ ರಕ್ಷಣೆಯಿಲ್ಲ, ಪೊಲೀಸರಿಗು ಕೂಡ ರಕ್ಷಣೆ ಇಲ್ಲದಂತಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ಶಾಸಕರಿಗೆ ರೂ. 50 ಕೋಟಿ ಹಾಗೂ ನನಗೆ ರೂ. 25 ಕೋಟಿ ಮಾತ್ರ ಕೊಟ್ಟಿದ್ದಾರೆ. ರಾಜ್ಯದಿಂದ ಅನೇಕ ಕಂಪನಿಗಳು ನೆರೆರಾಜ್ಯಗಳಿಗೆ ಹೋಗುತ್ತಿರುವುದರಿಂದ ಉದ್ಯೋಗದ ಅವಕಾಶಗಳು ತಪ್ಪುತ್ತಿವೆ' ಎಂದರು.

# ಎಲ್ಲರಿಗೂ ಉತ್ತಮ ಆಹಾರ ಒದಗಿಸಲು ಸಾವಯವ ಕೃಷಿ ಪದ್ದತಿಗೆ ಹೆಚ್ಚು ಉತ್ತೇಜನ ನೀಡಬೇಕಿದೆ– ಜಿಲ್ಲಾಧಿಕಾರಿ

**ಕೊಪ್ಪಳ :** ಎಲ್ಲರಿಗೂ ಉತ್ತಮ ಆಹಾರ ಒದಗಿಸಲು ಸಾವಯವ ಕೃಷಿ ಪದ್ದತಿಗೆ ಹೆಚ್ಚು ಉತ್ತೇಜನ ನೀಡಬೇಕಾಗಿದ್ದು, ಕೃಷಿ ಮತ್ತು ಪಶು ಸಖಿಯರು ಇಲಾಖಾ ಕಾರ್ಯಕ್ರಮಗಳ ಬಗ್ಗೆ ರೈತರಿಗೆ ಅರಿವು ಮೂಡಿಸಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು. ಅವರು ಗುರುವಾರ ಕೊಪ್ಪಳ ಜಿಲ್ಲಾ ಪಂಚಾಯತ್ ಜೆ.ಹೆಚ್ ಪಟೇಲ್ ಸಭಾಂಗಣದಲ್ಲಿ 2025–26ನೇ ಸಾಲಿನ ಆತ್ಮ ಯೋಜನೆ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಪಶುಸಂಗೋಪನೆ ಇಲಾಖೆ, ಮೀನುಗಾರಿಕೆ ಇಲಾಖೆ, ಕೃಷಿ ತಂತ್ರಜ್ಞರ ಸಂಸ್ಥೆ ಮತ್ತು ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ, ಕೊಪ್ಪಳ ಇವರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಆಹಾರ ದಿನಾಚರಣೆ–2025ರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಆಹಾರ ಮತ್ತು ಕೃಷಿ ಸಂಸ್ಥೆ (ಎಫ್.ಎ.ಒ) ಯ ಸ್ಥಾಪನೆ ದಿನವನ್ನು ವಿಶ್ವ ಆಹಾರ ದಿನಾಚರಣೆಯನ್ನಾಗಿ ಇಂದು ಆಚರಿಸಲಾಗುತ್ತಿದೆ. ಎಲ್ಲಾ ಜನರಿಗೂ ಸಹ ಒಳ್ಳೆಯ ಆಹಾರ ಸಿಗಬೇಕು ಎಂಬ ಉದ್ದೇಶದಿಂದ 'ಉತ್ತಮ ಆಹಾರ ಮತ್ತು ಉತ್ತಮ ಭವಿಷ್ಯಕ್ಕಾಗಿ ಕೈಜೋಡಿಸಿ' ಎಂಬ ಘೋಷವಾಕ್ಯದೊಂದಿಗೆ ಈ ವರ್ಷದ ವಿಶ್ವ ಆಹಾರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಸ್ವಾತಂತ್ರ್ಯ ಬಂದಾಗ ಭಾರತದ ಜನಸಂಖ್ಯೆ ಸುಮಾರು 34 ರಿಂದ 35 ಕೋಟಿ ಇದ್ದು, ಪ್ರಸ್ತುತ 146 ಕೋಟಿಗೆ ತಲುಪಿದೆ. ಪ್ರತಿಯೊಬ್ಬರಿಗೂ ಆಹಾರ



ಭದ್ರತೆಯನ್ನು ಒದಗಿಸುವ ಸಲುವಾಗಿ 2013ರಲ್ಲಿ ಅಂದಿನ ಪ್ರಧಾನ ಮಂತ್ರಿಗಳಾದ ಡಾ. ಮನಮೋಹನ ಸಿಂಗ್ ರವರ ನೇತೃತ್ವದ ಭಾರತ ಸರ್ಕಾರವು ಆಹಾರ ಭದ್ರತಾ ಕಾಯ್ದೆಯನ್ನು ಜಾರಿಗೆ ತಂದಿತು. ಇದರಿಂದ ಅಂತ್ಯೋದಯ ಅನ್ನ ಯೋಜನೆಯಡಿ 35 ಕೆ.ಜಿ ಅಕ್ಕಿ ಮತ್ತು ಇತರೆ ಧಾನ್ಯಗಳು, ಬಡ ಕುಟುಂಬಗಳಿಗೆ 5 ಕೆ.ಜಿ ಅಕ್ಕಿ ಹಾಗೂ ಇತರೆ ಧಾನ್ಯಗಳನ್ನು ನೀಡುವಂತಹ ಕಾರ್ಯಕ್ರಮ ಪ್ರಾರಂಭವಾಯಿತು ಎಂದರು.

ಪ್ರಸ್ತುತ ಜನರು ಫಾಸ್ಟ್‌ಫುಡ್ ಸೇವನೆ ಹೆಚ್ಚಾಗಿ ಮಾಡುತ್ತಿದ್ದಾರೆ. ಮಕ್ಕಳು ಸಹ ಚಾಕಲೇಟ್, ಬಿಸ್ಕೇಟ್, ಚಿಪ್ಸ್, ಕುರಕುರೆಯನ್ನು ತಿಂದರೆ, ನಗರ ಪ್ರದೇಶಗಳ ಹೆಚ್ಚು ಜನರು ದಿನನಿತ್ಯ ಮ್ಯಾಗಿ, ಬರ್ಗರ್, ಪಿಜ್ಜಾದಂತಹ ಫಾಸ್ಟ್‌ಫುಡ್ ಬಳಕೆ ಮಾಡುತ್ತಾರೆ. ನಿರಂತರ ಇಂತಹ ಆಹಾರ ಪದಾರ್ಥಗಳ ಸೇವನೆಯಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತದೆ.

ಆದ್ದರಿಂದ ಎಲ್ಲರೂ ಪೌಷ್ಟಿಕ ಆಹಾರಗಳ ಬಳಕೆಗೆ ಆದ್ಯತೆ ನೀಡಬೇಕು.

ಉತ್ತಮ ಆಹಾರ ಎಂದರೆ, ಸಮತೋಲಿತ ಆಹಾರವಾಗಿದೆ. ಈ ಹಿನ್ನೆಲೆಯಲ್ಲಿ ಅಂಗನವಾಡಿಗಳಲ್ಲಿ ಚಿಕ್ಕ ಮಕ್ಕಳಿಗೆ ಹಾಗೂ ಗರ್ಭಿಣಿ ಮತ್ತು ಬಾಣಂತಿಯರಿಗೆ, ಶಾಲಾ ಮಕ್ಕಳಿಗೂ ಸಹ ಪೌಷ್ಟಿಕ ಆಹಾರದ ಜೊತೆಗೆ ಹಾಲು, ಬಾಳೆಹಣ್ಣು ಮತ್ತು ಮೊಟ್ಟೆಯನ್ನು ನೀಡಲಾಗುತ್ತದೆ ಎಂದರು.

ಕೃಷಿಯಲ್ಲಿ ರಸಾಯನಿಕ ಗೊಬ್ಬರ, ಕೀಟ ನಾಶಕಗಳನ್ನು ಹೆಚ್ಚಾಗಿ ಬಳಕೆ ಮಾಡಿ ಬೆಳೆದ ದವಸ ದಾನ್ಯಗಳು, ತರಕಾರಿಗಳು, ಹಣ್ಣುಗಳ ಸೇವನೆಯಿಂದಾಗಿ ಮನುಷ್ಯನ ದೇಹದ ಮೇಲೆ ಪ್ರತಿಕೂಲ ಪರಿಣಾಮವುಂಟಾಗುತ್ತದೆ. ಇದನ್ನು ನಾವು ತಡೆಗಟ್ಟಬೇಕು. ಈ ಹಿನ್ನೆಲೆಯಲ್ಲಿ ನಮ್ಮ ಪರಂಪರಾಗತ ಕೃಷಿ ಯೋಜನೆಯಡಿ ಕೊಪ್ಪಳ ಜಿಲ್ಲೆಯ ಹಳ್ಳಿಗಳನ್ನು ಸಾವಯವ ಕೃಷಿ ಗ್ರಾಮಗಳನ್ನಾಗಿ ಮಾಡಲು ಪ್ರಯತ್ನಿಸುತ್ತಿದ್ದೇವೆ.

ಇದಕ್ಕೆ ಜಿಲ್ಲೆಯ ಎಲ್ಲಾ ರೈತರು ಕೈಜೋಡಿಸಬೇಕು. ಇದರ ಜೊತೆಗೆ ನೀರಿನ ಸಂರಕ್ಷಣೆ ಹಾಗೂ ಹಾಲು, ಮೊಟ್ಟೆ ಮತ್ತು ಮಾಂಸ ಉತ್ಪಾದನೆಯನ್ನು ಸಹ ಸಾವಯವ ಪದ್ದತಿಯಲ್ಲಿಯೇ ಮಾಡುವ ಅನಿವಾರ್ಯತೆಯಿದ್ದು, ಈ ಬಗ್ಗೆ ಸಂಬಂಧಿಸಿದ ಇಲಾಖೆಗಳ ಮೂಲಕ ರೈತರಿಗೆ ಮತ್ತು ಸಾರ್ವಜನಿಕರಿಗೆ ಅರಿವು ಮೂಡಿಸಬೇಕು ಎಂದು ಹೇಳಿದರು.

ಜಂಟಿ ಕೃಷಿ ನಿರ್ದೇಶಕರು ಹಾಗೂ ಕೃಷಿ ತಂತ್ರಜ್ಞರ ಸಂಸ್ಥೆಯ ಅಧ್ಯಕ್ಷರಾದ ಟಿ.ಎಸ್. ರುದ್ರೇಶಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕೃಷಿ ತಂತ್ರಜ್ಞರ ಸಂಸ್ಥೆಯ ಉಪಾಧ್ಯಕ್ಷರಾದ ವಿ.ಕೆ. ಕಮತರ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಗಂಗಾವತಿ ಕೃಷಿ ಮಹಾ ವಿದ್ಯಾಲಯ ಕೀಟ ಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ಬದ್ರಿಪ್ರಸಾದ ಪಿ.ಆರ್. ಹಾಗೂ ಗದಗ ಪಶು ವೈದ್ಯಕೀಯ ಮಹಾವಿದ್ಯಾಲಯ ಪ್ರಾಣಿ ಆಹಾರ ಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಬಣಕಾರ ಪಿ.ಎಸ್. ಅವರು ವಿಶೇಷ ಉಪನ್ಯಾಸ ನೀಡಿದರು.

ಸನ್ಮಾನ: ಜಿಲ್ಲೆಯ ಪ್ರಗತಿ ಪರ ರೈತರಿಗೆ ಮತ್ತು ವಿಶೇಷ ಉಪನ್ಯಾಸ ನೀಡಿದ ಉಪನ್ಯಾಸಕರಿಗೆ ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಪಶು ಇಲಾಖೆ ಉಪ ನಿರ್ದೇಶಕ ಡಾ. ಪಿ.ಎಂ. ಮಲ್ಲಯ್ಯ, ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಶ್ರೀನಿವಾಸ ಕುಲಕರ್ಣಿ, ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ವಿಸ್ತರಣಾ ಮುಂದಾಳು ಡಾ. ಎಂ.ವಿ. ರವಿ, ಉಪ ಕೃಷಿ ನಿರ್ದೇಶಕ ಎಲ್.ಸಿದ್ದೇಶ್ವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಮತ್ತು ಪ್ರಗತಿಪರ ರೈತರು, ಕೃಷಿ ಹಾಗೂ ಪಶು ಸಖಿಯರು ಮತ್ತಿತರರು ಉಪಸ್ಥಿತರಿದ್ದರು.

ಕೊಪ್ಪಳ ಸಹಾಯಕ ಕೃಷಿ ನಿರ್ದೇಶಕಿ (ರೈತ ಮಹಿಳೆ) ಶಶಿಕಲಾ ಯು. ಸವಣೂರು ಅವರು ಕಾರ್ಯಕ್ರಮ ನಿರೂಪಿಸಿದರು.

# ಜಿ.ಎನ್.ವಿ–1109 ಭತ್ತದ ತಳಿ ಬೆಳೆ ಪ್ರಾತ್ಯಕ್ಷಿಕೆ

**ಗಂಗಾವತಿ :** ತಾಲ್ಲೂಕಿನ ಮಲ್ಲಾಪುರ ಗ್ರಾಮದ ರೈತ ರಾಮಕೃಷ್ಣ ಅವರ ಜಮೀನಿನಲ್ಲಿ ಬೆಳೆದ ಭತ್ತದ ತಳಿ ಜಿ.ಎನ್.ವಿ–1109 ಕುರಿತು ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರದಿಂದ ಪ್ರಾತ್ಯಕ್ಷಿಕೆ ನಡೆಸಲಾಯಿತು.

ಕೆವಿಕೆ ಮುಖ್ಯಸ್ಥ ರಾಘವೇಂದ್ರ ಎಲಿಗಾರ ಮಾತನಾಡಿ,'ಗಂಗಾವತಿ ಕೃಷಿ ಸಂಶೋಧನಾ ಕೇಂದ್ರ ಜಿಎನ್‌ವಿ– 1109 ಭತ್ತದ ತಳಿ ಹೊರತಂದಿದ್ದು, ಈ ತಳಿ ಸವಳು ಮಣ್ಣಿನಲ್ಲಿ ಕಡಿಮೆ ವೆಚ್ಚಕ್ಕೆ, ಅಧಿಕ ಇಳುವರಿ ನೀಡಲಿದೆ.

ಸದ್ಯ ರೈತ ರಾಮಕೃಷ್ಣ ಬೆಳೆದಿದ್ದು, ಪ್ರಾತ್ಯಕ್ಷಿಕೆ



ತೋರಿಸಲಾಗುತ್ತಿದೆ. ರೈತರು ಕೃಷಿಯಲ್ಲಿ ಹೊಸ ಅವಿಷ್ಕಾರ, ಹೊಸ ತಳಿ, ತಂತ್ರಜ್ಞಾನ ಅಳವಡಿಸಿಕೊಂಡಾಗ ಮಾತ್ರ ಆರ್ಥಿಕವಾಗಿಅಭಿವೃದ್ಧಿ ಹೊಂದಲು ಸಾಧ್ಯ. ಎಲ್ಲ ರೈತರು ಕೃಷಿ ಚಟುವಟಿಕೆಯಲ್ಲಿ ವಿಭಿನ್ನ ಮತ್ತು ಕಡಿಮೆ ರಾಸಾಯನಿಕ ಬಳಕೆಯ ಬೆಳೆಗಳನ್ನು ಬೆಳೆಯಬೇಕು' ಎಂದರು.

ರಾಯಚೂರು ಕೃಷಿ ಸಂಶೋಧನಾ ಕೇಂದ್ರದ ಸಹ ಸಂಶೋಧನಾ ನಿರ್ದೇಶಕ ಜೆ.ಎಂ.ನಿಡಗುಂದಿ ಮಾತನಾಡಿ,'ಭತ್ತದ ಬೆಳೆಗೆ ಅತಿಯಾದ ನೀರು, ರಸಗೊಬ್ಬರ ಬಳಕೆಯಿಂದಭೂಮಿಸವಳಾಗಿ,ಉತ್ಪಾದಕತೆ ಕಡಿಮೆಯಾಗಿದೆ. ಸವಳು ಮಣ್ಣಿಗೆ ಸೂಕ್ತವಾದ ಬೆಳೆ ತೆಗೆಯಲು ಜಿಎನ್‌ವಿ–1109 ಭತ್ತದ ತಳಿ ಪರಿಚಯಿಸಲಾಗಿದೆ. ರೈತರು ಭೂಮಿ ಫಲವತ್ತತೆ ಕಾಪಾಡುವ ಜೊತೆಗೆ ವ್ಯವಸಾಯದಲ್ಲಿ ಖರ್ಚು ಕಡಿಮೆ ಮಾಡಿಕೊಳ್ಳಬೇಕು' ಎಂದರು. ಕೆವಿಕೆ ಸಸ್ಯರೋಗ ಶಾಸ್ತ್ರದ ವಿಜ್ಞಾನಿ ರೇವತಿ ಆರ್.ಎಂ,'ಭತ್ತದಲ್ಲಿ ಬರುವ ಪ್ರಮುಖ ರೋಗ ನಿರ್ವಹಣೆ ಬಗ್ಗೆ, ಮಣ್ಣು ವಿಜ್ಞಾನ ವಿಭಾಗದ ತಾಂತ್ರಿಕ ಅಧಿಕಾರಿ ಶೃತಿ ಎನ್. ಮಣ್ಣು ಪರೀಕ್ಷೆ ಹಾಗೂ ಸವಳು ಮಣ್ಣಿನ ನಿರ್ವಹಣೆ ಕುರಿ ತುಮಾಹಿತಿ ನೀಡಿದರು. ವಿಜ್ಞಾನಿ ಜೆ.ರಾಧಾ ಮಾತನಾಡಿದರು.

ಮಲ್ಲಾಪುರ ಗ್ರಾ.ಪಂ. ಅಧ್ಯಕ್ಷ ಛತ್ರಪ್ಪ ನಾಯಕ, ಮಲಿಯಪ್ಪ ಕಟ್ಟಿಮನಿ, ಪ್ರಗತಿಪರ ರೈತ ಪಂಪಾಪತಿ ಕಟ್ಟಿಮನಿ, ರಾಮಕೃಷ್ಣ ಕೆ, ಸಿದ್ದಲಿಂಗಯ್ಯ, ಗಂಗಾವತಿ ಬೆಳೆ ಸಮೀಕ್ಷೆಗಾರ ಹನುಮಂತಪ್ಪ ಸೇರಿದಂತೆ 60ಕ್ಕೂ ಹೆಚ್ಚು ರೈತರು ಉಪಸ್ಥಿತರಿದ್ದರು.

# ಉದ್ಯೋಗ ಮೇಳದಲ್ಲಿ 32 ಜನರ ಆಯ್ಕೆ



**ವಿಜಯಪುರ:** ಬಿ.ಎಲ್.ಡಿ.ಇ ಸಂಸ್ಥೆಯ ಶ್ರೀ ಸಂಗನಬಸವ ಮಹಾಸ್ವಾಮೀಜಿ ಪಾಲಿಟೆಕ್ನಿಕ ಕಾಲೇಜಿನಲ್ಲಿ ಅಕ್ಟೋಬರ್ 13 ಮತ್ತು 14 ರಂದು ದಕ್ಷಿಣ ಕೋರಿಯಾದ ಪ್ರತಿಷ್ಠಿತ ಸಿ.ಎನ್.ಸಿ ಯಂತ್ರಗಳ ಉತ್ಪಾದಕ ಸಂಸ್ಥೆ ಡಿ. ಎನ್. ಸೊಲೂಶನ್ಸ್ ಆಯೋಜಿಸಿದ್ದ ಎರಡು ದಿನಗಳ ಉದ್ಯೋಗ ಮೇಳದಲ್ಲಿ 32 ಜನ ಆಯ್ಕೆಯಾಗಿದ್ದಾರೆ.

ಬೆಂಗಳೂರಿನ ಡಿ. ಎನ್. ಸೊಲೂಶನ್ಸ್ ಸಂಸ್ಥೆಯ ಉಪಾಧ್ಯಕ್ಷ ಸುರೇಶ ನಾರಾಯಣ ಮತ್ತು ಮಾನವ ಸಂಪನ್ಮೂಲ ಅಧಿಕಾರಿ ಸ್ಮೀತಾ ಆರ್. ಅವರು ಈ ಉದ್ಯೋಗ ಮೇಳದಲ್ಲಿ ನಡೆಸಿದ ಸಂದರ್ಶನದಲ್ಲಿ ವಿಜಯಪುರ ಮತ್ತು ಸುತ್ತಮುತ್ತಲಿನ ಜಿಲ್ಲೆಗಳ ಡಿಪ್ಲೋಮಾ ಮೆಕ್ಯಾನಿಕಲ್ ಎಂಜಿಜಿನೀಯರಿಂಗ್, ಎಲೆಕ್ಟ್ರಿಕಲ್ ಎಂಜಿನೀಯರಿಂಗ್ ವಿಭಾಗದ 140ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ನಂತರ ಆಯ್ಕೆಯಾದ ವಿದ್ಯಾರ್ಥಿಗಳೊಂದಿಗಳು ಗ್ರುಪ್ ಫೋಟೋ ತೆಗೆಸಿಕೊಂಡರು. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯ ಪಿ. ಬಿ. ಕಳಸಗೊಂಡ ಮೆಕ್ಯಾನಿಕಲ್ ವಿಭಾಗದ ಮುಖ್ಯಸ್ಥ ಎಂ. ಸಿ. ಬಿರಾದಾರ, ಪ್ಲೇಸಮೆಂಟ್ ಅಧಿಕಾರಿ ಸುಧನ್ವ ವಿ. ಕುಲಕರ್ಣಿ, ಸಂತೋಷ ಹಿರೇಮಠ, ಪಾಂಡುರಂಗ ಅಸ್ಲಂಕರ, ಎಲ್ಲ ವಿಭಾಗದ ಮುಖ್ಯಸ್ಥರು, ಉಪನ್ಯಾಸಕರು ಉಪಸ್ಥಿತರಿದ್ದರು.

ಈ ಉದ್ಯೋಗ ಮೇಳದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಬಿ.ಎಲ್.ಡಿ.ಇ. ಸಂಸ್ಥೆಯ ಅಧ್ಯಕ್ಷ ಮತ್ತು ಸಚಿವ ಎಂ. ಬಿ. ಪಾಟೀಲ, ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲರು ಮತ್ತು ಬಿಎಲ್‌ಡಿಇ ಸಂಸ್ಥೆಯ ಆಡಳಿತ ಮಂಡಳಿ ನಿರ್ದೇಶಕರು ಹಾಗೂ ವಿದ್ಯಾಲಯದ ಎಲ್ಲಾ ಸಿಬ್ಬಂದಿ ವರ್ಗದವರು ಶುಭ ಹಾರೈಸಿದ್ದಾರೆ.

# ನಿಡಗುಂದಿ ತಾಲೂಕಾ ವಿವಿಧ ಕಚೇರಿಗಳಿಗೆ ಜಿಲ್ಲಾಧಿಕಾರಿ ಡಾ. ಆನಂದ ಭೇಟಿ, ಪರಿಶೀಲನೆ

**ವಿಜಯಪುರ :** ಜಿಲ್ಲೆಯ ನಿಡಗುಂದಿ ತಾಲೂಕಿನ ತಹಶೀಲ್ದಾರ ಕಚೇರಿ, ನ್ಯಾಯಬೆಲೆ ಅಂಗಡಿ, ಅಂಗನವಾಡಿ–ಗ್ರಾಮ ಒನ್ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಬುಧವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಿಡಗುಂದಿ ತಹಶೀಲ್ದಾರ ಕಚೇರಿ ಹಾಗೂ ಅಟಲ್ ಜನಸ್ನೇಹಿ ಕೇಂದ್ರಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದ ಅವರು, ವಿವಿಧ ಕೆಲಸ ಕಾರ್ಯಗಳಿಗೆ ಕಚೇರಿಗೆ ಆಗಮಿಸುವ ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಿ ಅವರ ಕಾರ್ಯಗಳಿಗೆ ಸ್ಪಂದಿಸಬೇಕು. ಸಕಾಲ ಅರ್ಜಿಗಳನ್ನು ಕೂಡಲೇ ವಿಲೇ ಮಾಡಬೇಕು. ಯಾವುದೇ ಬಾಕಿ ಕಡತಗಳನ್ನು ಉಳಿಸಿಕೊಳ್ಳದೇ ನಿಗದಿತ ಸಮಯದಲ್ಲಿ ವಿಲೆಗೆ ಕ್ರಮ ವಹಿಸಬೇಕು. ಕಚೇರಿ, ಕಚೇರಿ ಆವರಣದಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದು ಅವರು ಸೂಚನೆ ನೀಡಿದರು.

ತಹಶೀಲ್ದಾರ ಕಚೇರಿ ಎದುರಿನ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ, ನ್ಯಾಯ ಬೆಲೆ ಅಂಗಡಿಯಲ್ಲಿ ಸ್ಟಾಕ್ ರಜಿಸ್ಟರ್ ನಿರ್ವಹಣೆ ಮಾಡಬೇಕು. ಗ್ರಾಹಕರಿಗೆ ನಿಗದಿತ



ಅವಧಿಯಲ್ಲಿ ಆಹಾರ ಧಾನ್ಯಗಳನ್ನು ಎಲ್ಲ ಪಡಿತರ ಚೀಟಿದಾರರಿಗೆ ಹಂಚುವಂತೆ ಅವರು ಸೂಚನೆ ನೀಡಿದರು.

ಪಟ್ಟಣ ಪಂಚಾಯತಿ ಕಾರ್ಯಾಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ನಗರದಾದ್ಯಂತ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು. ಕಸ ಕಂಡಲ್ಲಿ ಫೋಟೋ ಕಳುಹಿಸಿ ಅಭಿಯಾನವನ್ನು ಸಮರ್ಪಕವಾಗಿ ಜಾರಿಗೊಳಿಸಿ ಕಸಮುಕ್ತವಾಗಿಸಲು ಕ್ರಮ ವಹಿಸಬೇಕು. ಕಸ ವಿಲೇವಾರಿ ಘಟಕ ಸ್ಥಾಪನೆಗೆ ಗುರುತಿಸಲಾದ ಸ್ಥಳದ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ತಾಲೂಕಾ ಆಸ್ಪತ್ರೆಗೆ ಭೇಟಿ ನೀಡಿ ಔಷಧ ವಿತರಣೆ ಕೌಂಟರ್ ಸೇರಿದಂತೆ ಆಸ್ಪತ್ರೆಯಲ್ಲಿ ರೋಗಿಗಳಿಗೆ ಒದಗಿಸಲಾಗುತ್ತಿರುವ ಚಿಕಿತ್ಸೆ ಕುರಿತು ಪರಿಶೀಲನೆ ನಡೆಸಿದ ಅವರು, ಮಕ್ಕಳು, ಗರ್ಭಿಣಿಯರಿಗೆ ಸೂಕ್ತ ಚಿಕಿತ್ಸೆ ಒದಗಿಸುವಂತೆ ಸೂಚಿಸಿದ ಅವರು, ಡಯಾಬಿಟಿಸ್ ಕೇಂದ್ರವನ್ನು ಪರಿಶೀಲನೆ ನಡೆಸಿದರು.

ಆಲಮಟ್ಟಿಯ ಮರಿಮಟ್ಟಿ ಗ್ರಾಮದ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ, ಮಕ್ಕಳಿಗೆ ಒದಗಿಸಲಾಗುತ್ತಿರುವ ಚಿತ್ರಾನ್ನ–ಮೊಟ್ಟೆಯನ್ನು ಸ್ವತ: ಜಿಲ್ಲಾಧಿಕಾರಿಗಳು ಸೇವಿಸಿ ಆಹಾರ ಗುಣಮಟ್ಟವನ್ನು ಪರಿಶೀಲನೆ ನಡೆಸಿದರು. ಅಂಗನವಾಡಿ ಕೇಂದ್ರಗಳಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವಂತೆ ಅವರು ಸೂಚನೆ ನೀಡಿ, ನಂತರ ಆಲಮಟ್ಟಿ ಗ್ರಾಮ ಒನ್ ಕೇಂದ್ರಕ್ಕೆ ಭೇಟಿ ನೀಡಿ, ಕೇಂದ್ರಕ್ಕೆ ಬರುವ ಸಾರ್ವಜನಿಕರಿಗೆ ಸಕಾಲಕ್ಕೆ ಮಾಹಿತಿ ನೀಡಬೇಕು. ಕೇಂದ್ರದಲ್ಲಿ ಸೇವಾ ಮನೋಭಾವದಿಂದ ಕಾರ್ಯ ನಿರ್ವಹಿಸಬೇಕು ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ ನಿಡಗುಂದಿ ತಹಶೀಲ್ದಾರ ಎ.ಡಿ. ಅಮರಾವದಗಿ, ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಪ್ರತಾಪ ಕೊಡಗೆ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶಿಲ್ಪಾ ಹಿರೇಮಠ, ವೈದ್ಯಾಧಿಕಾರಿ ಪ್ರಕಾಶ ನಾಟೀಕಾರ, ಆಹಾರ ನಿರೀಕ್ಷಕ ಗುತ್ತರಗಿ, ಕಂದಾಯ ನಿರೀಕ್ಷಕ ಸಲೀಮ ಯಲಗೋಡ, ಗ್ರಾಮಾಡಳಿತಾಧಿಕಾರಿ ನಾನಾಗೌಡ ಪಾಟೀಲ ಉಪಸ್ಥಿತರಿದ್ದರು.

# 132 ಮಳಿಗೆಗಳ ಮೆಗಾ ಮಾರ್ಕೆಟ್ ನಿರ್ಮಾಣ: ಅಶೋಕ ಮನಗೂಳಿ

**ಸಿಂದಗಿ :** ಕಂದಾಯ ಇಲಾಖೆಯ 1 ಎಕರೆ 14 ಗುಂಟೆ ಪ್ರದೇಶದಲ್ಲಿನ ಹಳೆಯ ತಹಶೀಲ್ದಾರ್ ಕಾರ್ಯಾಲಯ ಸ್ಥಳಾಂತರಗೊಂಡ ನಂತರ ಖಾಲಿ ಉಳಿದುಕೊಂಡಿತ್ತು.

ಈ ಜಾಗೆಯನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂಬ ಉದ್ದೇಶದಿಂದಾಗಿ ಸರ್ಕಾರ ಮಟ್ಟದಲ್ಲಿ ಈ ಪ್ರದೇಶವನ್ನು ಪುರಸಭೆಗೆ ಹಸ್ತಾಂತರಿಸಿಕೊಂಡು ಇಲ್ಲಿ 27.68 ಕೋಟಿ ವೆಚ್ಚದಲ್ಲಿ 132 ಮಳಿಗೆಗಳ ನಿರ್ಮಾಣ ಮಾಡುವ ಪ್ರಸ್ತಾವ ಸಲ್ಲಿಸಲಾಗಿತ್ತು. ಈಗ ಪ್ರಥಮ ಹಂತದಲ್ಲಿ 30 ಮಳಿಗೆಗಳ ನಿರ್ಮಾಣಕ್ಕಾಗಿ 5 ಕೋಟಿ ಅನುದಾನ ಬಿಡುಗಡೆಗೊಂಡಿದೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಪಟ್ಟಣದ ಕಂದಾಯ ಇಲಾಖೆಯ ಹಳೆಯ ತಹಶೀಲ್ದಾರ್ ಕಾರ್ಯಾಲಯದ ಪ್ರದೇಶದಲ್ಲಿ ಬುಧವಾರ ಮೆಗಾ ಮಾರ್ಕೆಟ್ ಕಟ್ಟಡ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದರು.

ಇನ್ನು ಒಂದೆರಡು ತಿಂಗಳಲ್ಲಿ ಇನ್ನೂ 10 ಕೋಟಿ ಬಿಡುಗಡೆಗೊಳಿಸುವ ಮೂಲಕ ಎಲ್ಲರ ಕಲ್ಪನೆಗೂ ಮೀರಿ ಸುಸಜ್ಜಿತವಾದ ಮೆಗಾ ಮಾರ್ಕೆಟ್ ಅನ್ನು ನನ್ನ ಅವಧಿಯಲ್ಲಿ ನಿರ್ಮಾಣ ಮಾಡುವುದು ನನ್ನ ಸಂಕಲ್ಪ. ಈ ಪ್ರದೇಶದ ಸುತ್ತ ಹಲವಾರು ವರ್ಷಗಳಿಂದ ಸಣ್ಣ, ಸಣ್ಣ ವ್ಯಾಪಾರ ಮಾಡುತ್ತಿದ್ದ ಅಂಗಡಿಗಳನ್ನು ತೆರವುಗೊಳಿಸಲಾಗಿದ್ದು, ಮುಂಬರುವ ದಿನಗಳಲ್ಲಿ ಇದೇ ಮಾರ್ಕೆಟ್‌ನಲ್ಲಿ ಅವರಿಗೆ ಕಡಿಮೆ ದರದ ಬಾಡಿಗೆಯಲ್ಲಿ ನೀಡಲಾಗುವುದು ಎಂದು ಭರವಸೆ ನೀಡಿದರು.

ಸರ್ಕಾರದಲ್ಲಿ ದುಡ್ಡೆ ಇಲ್ಲ ಎಲ್ಲ ಹಣ ಗ್ಯಾರಂಟಿಗಾಗಿ ಬಳಕೆಯಾಗಿದ್ದರಿಂದ ಅಭಿವೃದ್ಧಿ ಆಗುತ್ತಿಲ್ಲ ಎಂದು ವಿರೋದಪಕ್ಷ ವ್ಯವಸ್ಥಿತವಾಗಿ ಸರ್ಕಾರದ ವಿರುದ್ಧ ಟೀಕೆ ಮಾಡುತ್ತಿದೆ.

ಅಭಿವೃದ್ಧಿಗಾಗಿ ಸರ್ಕಾರದಲ್ಲಿ ಸಾಕಷ್ಟು ಹಣವಿದೆ. ರಾಜಕಾರಣದಲ್ಲಿ ಟೀಕೆ–ಟಿಪ್ಪಣೆ ಸಹಜ ಅದಕ್ಕೆ ಸ್ವಾಗತಿಸುವೆ.

ಅಭಿವೃದ್ಧಿಯೇ ನನ್ನ ಗುರಿ ಎಂದು ವಿರೋದಪಕ್ಷದ ಟೀಕೆಗೆ ಉತ್ತರಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಡಾ.ಶಾಂತವೀರ ಮನಗೂಳಿ ಮಾತನಾಡಿ, ಸರ್ಕಾರವನ್ನು ಅಭಿನಂದಿಸಿದರು. ಪುರಸಭೆ ಸದಸ್ಯ ಸಾಯಬಣ್ಣ ಪುರದಾಳ ಪ್ರಾಸ್ತಾವಿಕವಾಗಿ ಮಾತನಾಡಿದರು.

ಪುರಸಭೆ ಉಪಾಧ್ಯಕ್ಷ ಸಂದೀಪ ಚೌರ ಒಳಗೊಂಡಂತೆ ಸದಸ್ಯರು, ಆಶ್ರಯ ಸಮಿತಿ ಸದಸ್ಯರು, ಪುರಸಭೆ ಅಧಿಕಾರಿ ವರ್ಗ ವೇದಿಕೆಯಲ್ಲಿದ್ದರು.

# ಸಂಸ್ಕೃತಿಯಿಂದ ಯುವಜನ ವಿಮುಖ: ಡಾ. ಜಾವಿದ ಜಮಾದಾರ ವಿಷಾದ

**ವಿಜಯಪುರ:** ಭಾರತ ಶ್ರೀಮಂತ ಸಂಸ್ಕೃತಿ ಪೋಷಿಸುತ್ತ ಸಾರ್ವತ್ರಿಕ ಮೌಲ್ಯಗಳನ್ನು ಜಗತ್ತಿಗೆ ಬಿತ್ತರಿಸುತ್ತಿದೆ. ಅಂತಹ ಮೌಲ್ಯಾಧಾರಿತ ಸಂಸ್ಕೃತಿಯನ್ನು ಮೈಗೂಡಿಸಿಕೊಳ್ಳಲು ಇಂದಿನ ಯುವ ಜನಾಂಗ ಹಿಂದೇಟು ಹಾಕುತ್ತಿರುವುದು ವಿಷಾದನೀಯ ಸಂಗತಿ ಎಂದು ರಾಷ್ಟ್ರ ಪ್ರಶಸ್ತಿ ಪುರಸ್ಕೃತರ ಫೆಡರೇಶನದ ರಾಷ್ಟ್ರೀಯ ಅಧ್ಯಕ್ಷ ಡಾ. ಜಾವೀದ ಜಮಾದಾರ ಹೇಳಿದರು.

ನಗರದ ಬಿ.ಎಲ್.ಡಿ.ಇ. ಅಸೋಸಿಯೇಶನ್ ಎ.ವಿ.ಎಫ್. ಆಯುರ್ವೇದ ಮಹಾವಿದ್ಯಾಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ನೆಹರು ಯುವ ಕೇಂದ್ರ ರಾಷ್ಟ್ರೀಯ ಸೇವಾ ಯೋಜನೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಆಶ್ರಯದಲ್ಲಿ ಏರ್ಪಡಿಸಿದ 2025ನೇ ಸಾಲಿನ ವಿಜಯಪುರ



ಜಿಲ್ಲಾ ಮಟ್ಟದ ಯುವಜನೋತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಪಾಶ್ಚಾತ್ಯ ಸಂಸ್ಕೃತಿಯ ಅತಿಯಾದ ವ್ಯಾಮೋಹದಿಂದ ಯುವಜನತೆ ನಮ್ಮ ಸಂಸ್ಕೃತಿಯ ಬಗ್ಗೆ ಒಲವು ಬೆಳೆಸಿಕೊಳ್ಳುತ್ತಿಲ್ಲ. ಪಾಶ್ಚಾತ್ಯ ಸಂಸ್ಕೃತಿಯನ್ನು ಅನುಕರಣೆ ಮಾಡುವದಕ್ಕಿಂತ ನಮ್ಮ ನೆಲದ ಭವ್ಯ ಸಂಸ್ಕೃತಿಯನ್ನು ಅಳವಡಿಸಿಕೊಳ್ಳಬೇಕು ಎಂದರು.

ಜಾನಪದ ಸಂಸ್ಕೃತಿ ಉಳಿಸಿ ಬೆಳೆಸಲು ಪ್ರತಿಯೊಬ್ಬರು ಪಣತೊಡಬೇಕಾಗಿದೆ. ಜನಪದ ಕಲೆಗಳು ಮಾನವೀಯ ಸಂಬಂಧದ ಸರಪಳಿ. ಜಾನಪದ ಕಲೆ ನಮ್ಮ ಪೂರ್ವಜರು ನೀಡಿದ ಅನುಪಮ ಕೊಡುಗೆ. ಯುವಜನರು ಕಲೆ, ಸಾಹಿತ್ಯ ಆರಾಧಕರಾಗಿರಬೇಕು. ಸಾಂಸ್ಕೃತಿಕ ರಾಯಭಾರಿಗಳಾಗಿ ತನ್ಮೂಲಕ ದೇಶದ ಕೀರ್ತಿ ಬೆಳೆಸಬೇಕೆಂದರು.

ನಮ್ಮ ದೇಶದ ಭವ್ಯವಾದ ಕಲೆ, ಸಂಸ್ಕೃತಿ, ಜನಪದ ಸೇರಿದಂತೆ ಎಲ್ಲ ಕಲಾ ಪ್ರಕಾರಗಳನ್ನು ಯುವಜನತೆ ಉಳಿಸಿ ಬೆಳೆಸಲು ಮುಂದಾಗಬೇಕೆಂದು ಸಲಹೆ ನೀಡಿದರು.

ರಾಜ್ಯ ಯುವ ಪ್ರಶಸ್ತಿ ಪುರಸ್ಕೃತ ಅರವಿಂದ ಕೊಪ್ಪ ಅತಿಥಿಗಳಾಗಿ ಮಾತನಾಡಿ, ವಿಜಯಪುರ ಜಿಲ್ಲೆ ಜನಪದ ಕಲೆಗಳ ತವರೂರು. ಇಲ್ಲಿನ ಯುವಕ ಯುವತಿಯರು ಜನಪದಕಲೆಗಳನ್ನುಪ್ರೀತಿಸಬೇಕು. ಯುವಜನರು ಮನಸ್ಸು ಮಾಡಿದರೆ ದೇಶದ ಚಿತ್ರಣವನ್ನೇ ಬದಲಿಸಬಹುದು. ಬದಲಾದ ಜೀವನ ಶೈಲಿ ಒತ್ತಡಗಳಿಂದ ಜೀವನ ಮೌಲ್ಯಗಳು ಅಪಾಯದ ಅಂಚಿಗೆ ಸರಿಯುತ್ತಿದೆ. ಯುವಜನರು ಸಾಂಸ್ಕೃತಿಕವಾಗಿ ವಿಮುಖರಾಗಬಾರದೆಂದರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ ಆಯುರ್ವೇದ ಮಹಾವಿದ್ಯಾಲಯದ ಪ್ರಾಚಾರ್ಯ ಅಶೋಕ ಪಾಟೀಲ ಮಾತನಾಡಿ, ನಮ್ಮ ಸಂಸ್ಕೃತಿ ಬಗ್ಗೆ ಒಲವು ಬೆಳೆಸಿಕೊಳ್ಳಬೇಕು. ಜನಪದಕಲಿಕೆಗಾಗಿಹೆಚ್ಚಿನಒತ್ತನ್ನು ನೀಡಬೇಕಾಗಿದೆ. ಯುವಕರಿಗೆ ಶಿಕ್ಷಣದ ಜೊತೆಗೆ ಸಂಸ್ಕೃತಿ, ಕ್ರೀಡೆ, ಜೀವನ ಮೌಲ್ಯಗಳ ಬಗ್ಗೆ ಹೆಚ್ಚಿನ ಒತ್ತನ್ನು ನೀಡಬೇಕಾಗಿದೆ. ಶಾಲಾ ಕಾಲೇಜುಗಳಲ್ಲಿ ನಮ್ಮ ಕಲೆ, ಸಂಸ್ಕೃತಿಯನ್ನು ಬಿಂಬಿಸುವ ಕಾರ್ಯಕ್ರಮಗಳು ಹೆಚ್ಚಾಗಿ ನಡೆಯಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಸಹಾಯಕ ನಿರ್ದೇಶಕ ರಾಜಶೇಖರ ದೈವಾಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ರಾಜ್ಯ ಯುವ ಪ್ರಶಸ್ತಿ ಪುರಸ್ಕೃತ ಸಂಜು ಕೋತ, ಎಕ್ಸಲೆಂಟ್ ಕಾಲೇಜಿನ ಪ್ರಾಚಾರ್ಯ ಶ್ರೀಕಾಂತ, ಡಾ. ಡಿ.ಎನ್. ಧರಿ ಉಪಸ್ಥಿತರಿದ್ದರು.

ವಿಜಯಪುರ ನಗರ ಹಾಗೂ ಜಿಲ್ಲೆಯಿಂದ ಅಪಾರ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು, ಪ್ರಾಚಾರ್ಯರು ಹಾಗೂ ಕ್ರೀಡಾ ತರಬೇತುದಾರರು ಆಯುರ್ವೇದ ಮಹಾವಿದ್ಯಾಲಯದ ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು.

# ನೇಣು ಬಿಗಿದ ಸ್ಥಿತಿಯಲ್ಲಿ ಅಪ್ರಾಪ್ತ ಬಾಲಕಿ ಶವ ಪತ್ತೆ: ಪ್ರತಿಭಟನೆ, ಆಕ್ರೋಶ



**ವಿಜಯಪುರ:** ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನಲ್ಲಿ ಅಪ್ರಾಪ್ತ ಬಾಲಕಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿರುವುದನ್ನು ಖಂಡಿಸಿ ನಗರದಲ್ಲಿ ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆ ವತಿಯಿಂದ ನಗರದ ಅಂಬೇಡ್ಕರ ವೃತ್ತದಲ್ಲಿ ಬುಧವಾರ ಪ್ರತಿಭಟನೆ ನಡೆಸಲಾಯಿತು.

ಎಐಎಮ್‌ಎಸ್‌ಎಸ್‌ನ ಜಿಲ್ಲಾ ಕಾರ್ಯದರ್ಶಿ ಶಿವಬಾಳಮ್ಮ ಕೊಂಡಗೂಳಿ ಮಾತನಾಡಿ, ದೇಶದಲ್ಲಿ ಹೆಣ್ಣುಮಕ್ಕಳ ಮೇಲಿನ ದೌರ್ಜನ್ಯಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿವೆ. ಇದಕ್ಕೆ ನಮ್ಮ ಜಿಲ್ಲೆಯೂ ಹೊರತಾಗಿಲ್ಲ, ಮುದ್ದೇಬಿಹಾಳ ತಾಲೂಕಿನಲ್ಲಿ ಅಪ್ರಾಪ್ತ ಬಾಲಕಿ ಶವ ಮರಕ್ಕೆ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಘಟನೆ ಬಗ್ಗೆ ಸೂಕ್ತ ಹಾಗೂ ನಿಷ್ಪಕ್ಷಪಾತವಾಗಿ ತನಿಖೆ ನಡೆಸಬೇಕು. ಅಪರಾಧಿಗಳಿಗೆ ನಿದರ್ಶನೀಯ ಶಿಕ್ಷೆ ನೀಡಬೇಕು. ಜಿಲ್ಲೆಯಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಈ ಪ್ರತಿಭಟನೆಯನ್ನು ಉದ್ದೇಶಿಸಿ ಎಐಎಮ್‌ಎಸ್‌ಎಸ್‌ನ ಜಿಲ್ಲಾ ಅಧ್ಯಕ್ಷೆ ಗೀತಾ ಎಚ್ ಅವರು ಹಾಗೂ ಮೀನಾಕ್ಷಿ ಸಿಂಘೆ, ನೀಲಾಂಬಿಕೆ, ಶಶಿಕಲಾ ಅವರು ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿ, ಜಿಲ್ಲೆಯ ಎಲ್ಲಾ ಪ್ರಜ್ಞಾವಂತರು ಈ ಘಟನೆಯನ್ನು ಖಂಡಿಸಬೇಕು ಎಂದು ಕರೆನೀಡಿದರು. ಅಮೂಲ್ಯ, ಸುಷ್ಮಿತಾ ಚಲವಾದಿ, ಐಶ್ವರ್ಯ ಜಾಧವ, ಭಾಗ್ಯಲಕ್ಷ್ಮೀ, ನೀಲಾಂಬಿಕಾ, ಲಕ್ಷ್ಮೀ ಮುಂತಾದವರು ಭಾಗವಹಿಸಿದ್ದರು.

# ಆರ್‌ಎಸ್‌ಎಸ್ ಪಥಸಂಚಲನ: ಲಾಠಿ ನಿಷೇಧಿಸಲು ಆಗ್ರಹ

**ಸಿಂದಗಿ :** ಅ.18ರಂದು ಸಿಂದಗಿ ಪಟ್ಟಣದಲ್ಲಿ ನಡೆಯಲಿರುವ ಆರ್‌ಎಸ್‌ಎಸ್ ಪಥ ಸಂಚಲನದಲ್ಲಿ ಸಂಘಟನೆಯ ಕಾರ್ಯಕರ್ತರು ಕೈಯಲ್ಲಿ ಲಾಠಿ ಹಿಡಿದುಕೊಳ್ಳುವುದನ್ನು ತಾಲ್ಲೂಕು ಆಡಳಿತ ತಡೆಯಬೇಕು ಎಂದು ಟಿಪ್ಪು ಕ್ರಾಂತಿ ಸೇನೆ ರಾಜ್ಯ ಘಟಕದ ಪ್ರದಾನ ಕಾರ್ಯದರ್ಶಿ ದಸ್ತಗೀರ ಮುಲ್ಲಾ ನೇತೃತ್ವದಲ್ಲಿ ಕಾರ್ಯಕರ್ತರು ಬುಧವಾರ ತಾಲ್ಲೂಕು ಪ್ರಜಾಸೌಧದಲ್ಲಿ ತಹಶೀಲ್ದಾರ್ ಕರೆಪ್ಪ ಬೆಳ್ಳಿ ಅವರಿಗೆ ಮನವಿ ಸಲ್ಲಿಸಿದರು.

ಕೈಯಲ್ಲಿ ಮಾರಕಾಸ್ತ್ರ ಲಾಠಿ ಹಿಡಿದುಕೊಂಡು ಬೀದಿಗಳಲ್ಲಿ ಜನರನ್ನು ಭಯಭೀತರನ್ನಾಗಿಸುವ ಹುನ್ನಾರ ನಡೆಸಿದ್ದಾರೆ ಎಂದು ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿದೆ.

ಹೀಗಾಗಿ ತಾಲ್ಲೂಕು ಆಡಳಿತ ಸೂಕ್ತ ಕ್ರಮ ಕೈಗೊಳ್ಳಬೇಕು. ಲಾಠಿ ಕೈಯಲ್ಲಿ ಹಿಡಿಯಲು ಪರವಾನಗಿ ನೀಡಬಾರದು. ಒಂದು ವೇಳೆ ಅವಕಾಶ



ಇದ್ದರೆ ನಮಗೂ ಕೂಡ ಪರವಾನಗಿ ಮತ್ತು ಸೂಕ್ತ ಬಂದೋಬಸ್ತ್ ನೀಡಬೇಕು ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

ಟಿಪ್ಪು ಕ್ರಾಂತಿ ಸೇನೆ ಉತ್ತರ ಕರ್ನಾಟಕ ವಲಯ ಅಧ್ಯಕ್ಷ ರಜಾಕ ನಾಟೀಕಾರ, ಇಮ್ರಾನ್ ಬಳಗಾನೂರ, ಆರೀಫ್ ಡೋನಿವಾಲೆ,

ಇಬ್ರಾಹೀಂ ನಟೀಕಾರ, ಅಲ್ತಾಫ್ ಮುಗಳಿ, ಶಬ್ಬೀರ ಪಟೇಲ್, ರಜಾಕಪಟೇಲ್,

ಅಮೀರ ನಾಟೀಕಾರ, ಜುಬೇರ ಬಾಗವಾನ, ಹುಸೇನ ನಧಾಪ ಇದ್ದರು.

# ಪ್ರತಿ ಎಕರೆಗೆ 50 ಸಾವಿರ ಪರಿಹಾರ ನೀಡಿ: ಸಂಗಮೇಶ ಸಗರ ಆಗ್ರಹ

**ಇಂಡಿ :** ಕಳೆದ ಐದು ತಿಂಗಳಿಂದ ತಾಲ್ಲೂಕಿನಲ್ಲಿ ಸುರಿಯುತ್ತಿರುವ ವಿಪರೀತ ಮಳೆಯಿಂದಾಗಿ ಬೆಳೆಗಳು ಹಾಳಾಗಿವೆ. ಸರ್ಕಾರ ಜಂಟಿ ಸಮೀಕ್ಷೆ ನೆಪದಲ್ಲಿ ಸಮಯ ವ್ಯರ್ಥ ಮಾಡದೇ ಒಣ ಬೇಸಾಯಕ್ಕೆ 50 ಸಾವಿರ ಹಾಗೂ ನೀರಾವರಿ ಭೂಮಿಗೆ 1 ಲಕ್ಷ ಹಾಗೂ ಬಹುವಾರ್ಷಿಕ ಬೆಳೆಗಳಿಗೆ 2 ಲಕ್ಷ ಪರಿಹಾರ ಕೊಡಬೇಕೆಂದು ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸಂಗಮೇಶ ಸಗರ ಆಗ್ರಹಿಸಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಇಂಡಿ ತಾಲ್ಲೂಕು ತಹಶೀಲ್ದಾರರಿಗೆ ಮನವಿ ಸಲ್ಲಿಸಿದರು.

ಸಮಸ್ತ ಬೆಳೆಗಳು ಕೂಡ ನಷ್ಟಗೊಂಡಿರುವ ಹಿನ್ನೆಲೆಯಲ್ಲಿ ಯಾರಿಗೂ ತಾರತಮ್ಯ ಮಾಡದೆ ಎಲ್ಲರಿಗೂ ನಷ್ಟ ಪರಿಹಾರವನ್ನು



ಹಾಕಬೇಕು. ಅದೇ ರೀತಿಯಾಗಿ ಫಸಲು ಭೀಮಾ ಯೋಜನೆಯ ವಿಮೆಯೂ ಆದಷ್ಟು ಬೇಗ ಕೊಡಬೇಕು' ಎಂದರು.

ತಾಲ್ಲೂಕು ಘಟಕದ ಅಧ್ಯಕ್ಷ ಮಾಳು ಪೂಜಾರಿ ಮಾತನಾಡಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್, 'ಈಗಾಗಲೇ ಮೊದಲನೇ ಹಂತದಲ್ಲಿ ನಷ್ಟಗೊಂಡ ರೈತರಿಗೆ ಪರಿಹಾರಕ್ಕೆ ಗುರುತಿಸಲಾಗಿತ್ತು. ಮತ್ತೆ ಇತ್ತೀಚಿಗೆ ಹೆಚ್ಚಿನ ಮಳೆ ಉಂಟಾಗಿ ಅನೇಕ ರೈತರ ಜಮೀನುಗಳಲ್ಲಿ ನೀರು ನಿಂತು ನಷ್ಟಗೊಂಡಿರುವ ಕುರಿತು ಪ್ರಥಮ ವರದಿಯನ್ನು ಆಯಾ ಗ್ರಾಮ ಪಂಚಾಯಿತಿ ಕಚೇರಿ ಮುಂದೆ ಅಂಟಿಸಲಾಗಿದೆ. ಇನ್ನೂ ಯಾವುದೇ ರೈತರು ನಷ್ಟಗೊಂಡು ಉಳಿದಿದ್ದರೆ ಅಂಥವರು ದಾಖಲೆಗಳನ್ನು ನೀಡಬೇಕು' ಎಂದು ತಿಳಿಸಿದರು.

ಮುರಘೇಂದ್ರ ಸಿಂಪಿ, ಮಹಾದೇವ ಬನಸೋಡೆ, ಗೇನಪ್ಪ ಬಿರಾದಾರ, ಗಂಗಾಧರ್ ಮಾನೆ, ಶ್ರೀಶೈಲ ಪೈಕರ್, ಶಂಕ್ರಪ್ಪ ಸಾಲೋಟಗಿ, ಸೋಮನಿಂಗ್ ನಿಂಗಾರಿ, ಧರ್ಮರಾಜ್ ಪಾಟೀಲ್, ಮಾಳಪ್ಪ ಹಿರೇಕುರಬರ, ಮಾಂತೇಶ ಬಡಿಗೇರ್, ನಾಗಪ್ಪ ಗುಡ್ಲ, ದತ್ತು ಹೇಳವಾರ, ಸಂಜು ಹಿರೇಕುರಬರ, ಹನಮಂತ ಹೂಗಾರ, ಚಂದು ಬೆನೂರ, ಮಮ್ಮದ ಮುಲ್ಲಾ, ಸಂತೋಷ್ ಟೆಂಗಳೆ, ಅಮ್ಮಸಿದ್ಧ ಆಸಂಗಿ ಇದ್ದರು.

# ಯಾರ ಹಿತಕ್ಕಾಗಿ ಪಿಪಿಪಿ ಮಾದರಿ: ರಾಜೇಂದ್ರ ಪೋದ್ದಾರ

**ವಿಜಯಪುರ :** ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಆರಂಭಿಸುವಲ್ಲಿ ಖಾಸಗಿ ಸಹಭಾಗಿತ್ವವನ್ನು ಸಂಪೂರ್ಣವಾಗಿ ವಿರೋಧಿಸುತ್ತೇನೆ. ಯಾರ ಹಿತಕ್ಕಾಗಿ ಪಿಪಿಪಿ ಮಾದರಿ ಎಂಬುದನ್ನು ಜನರಿಗೆ ತಿಳಿಸಬೇಕು ಹಾಗೂ ಖಾಸಗಿಯರಿಗೆ ಲಾಭ ಮಾಡುವ ಉದ್ದೇಶ ಪಿಪಿಪಿ ಮಾದರಿ ಹೊಂದಿದೆ ಎಂದು ಧಾರವಾಡದ ವಾಲ್ಮಿಯ ಮಾಜಿ ನಿರ್ದೇಶಕ ರಾಜೇಂದ್ರ ಪೋದ್ದಾರ ಹೇಳಿದರು.

ವಿಜಯಪುರ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗಾಗಿ ನಡೆಯುತ್ತಿರುವ ಅನಿರ್ದಿಷ್ಟಾವಧಿ ಧರಣಿಯಲ್ಲಿ ಬುಧವಾರ ಪಾಲ್ಗೊಂಡು ಬೆಂಬಲ ವ್ಯಕ್ತಪಡಿಸಿ ಅವರು ಮಾತನಾಡಿದರು.

ಖಾಸಗಿ ಸಹಭಾಗಿತ್ವ ಬಡವರ ಮೇಲೆ ಯಾವ ರೀತಿ ಪರಿಣಾಮ ಬೀರುತ್ತದೆ ಎಂಬುದನ್ನು ಜನರು ಮನಗಾಣಬೇಕು.





ಇದಕ್ಕೆ ಜನಪ್ರತಿನಿಧಿಗಳು ಸ್ಪಂದಿಸಬೇಕು, ಎಲ್ಲಾ ವರ್ಗದವರು ಒಂದುಗೂಡಿ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭಿಸಲು ಹೋರಾಟ ಬೆಳೆಸಬೇಕು ಎಂದು ಹೇಳಿದರು. ಸಮ ಸಮಾಜದ ನಿರ್ಮಾಣದ ಕನಸು ಈಡೇರಿಸಿಬೇಕಿದೆ, ಪ್ರತಿರೋಧವೆ ಸಮಾಜವನ್ನು ಉಳಿಸುವ ಪ್ರಬಲವಾದ ಅಸ್ತ್ರ ಅದಕ್ಕಾಗಿ ಎಲ್ಲರು ಒಗ್ಗಟ್ಟಿನಿಂದ ಹೋರಾಟ ಬೆಳೆಸಬೇಕಿದೆ ಎಂದು ಕರೆ ನೀಡಿದರು.

ಕರ್ನಾಟಕರಾಜ್ಯಐಟಿಐಅಸೋಸಿಯೇಷನ್ ಅಧ್ಯಕ್ಷ ಎಸ್. ಎಂ. ನೆರಿಬೆಂಚಿ ಮಾತನಾಡಿ, ವಿಜಯಪುರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡುವವರೆಗೆ ನಾವು ಹೋರಾಟದ ಜೊತೆ ಇರುತ್ತೇವೆ, ಯಾವುದೇ ಕಾರಣಕ್ಕೂ ಖಾಸಗಿಯವರಿಗೆ ಬಿಟ್ಟುಕೊಡಲು ಬಿಡುವುದಿಲ್ಲ, ನಮ್ಮ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಮೊದಲೇ ಸ್ಥಾಪನೆಯಾಗಬೇಕಿತ್ತು. ಬಡವರ ಮಕ್ಕಳು ವೈದ್ಯಕೀಯ ಶುಲ್ಕ ಕಡಿಮೆ ಕೊಟ್ಟು ಓದಲು ಸರ್ಕಾರಿ ವೈದ್ಯಕೀಯ ಕಾಲೇಜು ನಮ್ಮ ಜಿಲ್ಲೆಗೆ ಅವಶ್ಯಕತೆ ಇದೆ. ಇದನ್ನು ಸರ್ಕಾರ ಜವಾಬ್ದಾರಿಯಿಂದ ನಿರ್ಮಾಣ ಮಾಡಿಕೊಡಬೇಕು ಎಂದು ಆಗ್ರಹಿಸಿದರು.

ಹೋರಾಟ ಸಮಿತಿಯ ಸದಸ್ಯರಾದ ಅರವಿಂದ ಕುಲಕರ್ಣಿ, ಬಿ. ಭಗವಾನ್ ರೆಡ್ಡಿ, ಲಲಿತಾ ಬಿಜ್ಜರಗಿ, ವಿದ್ಯಾವತಿ ಅಂಕಲಗಿ, ಅಕ್ರಂ ಮಾಶ್ಯಾಳಕರ, ಮಲ್ಲಿಕಾರ್ಜುನ ಎಚ್. ಟಿ, ಸುರೇಶ ಬಿಜಾಪುರ, ಜಗದೇವ ಸೂರ್ಯವಂಶಿ, ಲಕ್ಷ್ಮಣ ಕಂಬಾಗಿ, ಗಿರೀಶ ಕಲಘಟಗಿ, ಭರತ್ ಕುಮಾರ ಎಚ್. ಟಿ, ಶ್ರೀನಾಥ್‌ಪೂಜಾರಿ, ಸುರೇಶ್‌ಜೀಬಿ, ದಸ್ತಗಿರಿ ಉಕ್ಕಲಿ, ಸಿದ್ರಾಮ ಹಳ್ಳೂರ, ಮಲ್ಲಿಕಾರ್ಜುನ ಬಟಗಿ, ಡಾ ಎಂ.ಎಸ್. ಗುರಿಕಾರ, ನೀಲಾಂಬಿಕಾ ಬಿರಾದಾರ, ಗೀತಾ ಪಾಟೀಲ, ಗೀತಾ ಕಟ್ಟಿ, ಶಿವಬಾಳಮ್ಮ ಕೊಂಡಗೂಳಿ, ಗೀತಾ. ಎಚ್, ಮೀನಾಕ್ಷ ಸಿಂಗೆ, ಕಾಮಿನಿ ಧರಣಿಯಲ್ಲಿ ಪಾಲ್ಗೊಂಡಿದ್ದರು.

# ಬಾಲಕಿ ಆತ್ಮಹತ್ಯೆಗೆ ಪ್ರಚೋದನೆ ಆರೋಪ: ಇಬ್ಬರ ಬಂಧನ

**ಮುದ್ದೇಬಿಹಾಳ:** ತಾಲ್ಲೂಕಿನಗ್ರಾಮವೊಂದರ ಪರಿಶಿಷ್ಟ ಜಾತಿಯ ಬಾಲಕಿಯ ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಆರೋಪದ ಮೇಲೆ ಇಬ್ಬರನ್ನು ಪೊಲೀಸರು ಬಂಧಿಸಿದ್ದಾರೆ.

ಪ್ರೀತಿಸುವುದಾಗಿ ಮೂರು ತಿಂಗಳಿನಿಂದ ಮಾಳಿಂಗರಾಯ ದಂಡೋಜಿ ಎಂಬಾತ ಪೀಡಿಸುತ್ತಿದ್ದ. ಮಗಳಿಗೆ ಬೇರೊಬ್ಬರ ಜೊತೆ ಮದುವೆಗೆ ಮಾತುಕತೆ ನಡೆಸಿದ್ದೆವು. ಇದನ್ನು ತಿಳಿದು ಆರೋಪಿ ನನ್ನನ್ನೇ ಮದುವೆ ಆಗಬೇಕು ಎಂದು ಮಗಳಿಗೆ ದೈಹಿಕ, ಮಾನಸಿಕ ಹಿಂಸೆ ನೀಡಿದ. ಬೇಸತ್ತ ಮಗಳು ಮಂಗಳವಾರ ನೇಣುಹಾಕಿ ಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ' ಎಂದು ಬಾಲಕಿಯ ಪೋಷಕರು ದೂರಿನಲ್ಲಿ ಆರೋಪಿಸಿದ್ದಾರೆ.



ಆರೋಪಿ ಮಾಳಿಂಗರಾಯ ದಂಡೋಜಿ ಮತ್ತು ಪ್ರಕರಣಕ್ಕೆ ಕುಮ್ಮಕ್ಕು ನೀಡಿದ ಆತನ ಸ್ನೇಹಿತ ಶಿವನಗೌಡ ಬಿರಾದಾರ ವಿರುದ್ಧ ಪೋಕ್ಸೊ ಮತ್ತು ದೌರ್ಜನ್ಯ ಪ್ರಕರಣ ದಾಖಲಿಸಿಕೊಂಡು, ಬಂಧಿಸಲಾಗಿದೆ' ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ತಿಳಿಸಿದ್ದಾರೆ.

**ಶವ ಇಟ್ಟು ಪ್ರತಿಭಟನೆ:**

ಅತ್ಯಾಚಾರ ಮಾಡಿ ಬಾಲಕಿ ಕೊಲೆ ಮಾಡಲಾಗಿದೆ. ಕುಟುಂಬಕ್ಕೆ ಸೂಕ್ತ ಪರಿಹಾರ ನೀಡಬೇಕು.

ಆರೋಪಿಗಳಿಗೆ ಶಿಕ್ಷೆ ವಿಧಿಸಬೇಕು' ಎಂದು ದಲಿತ ಹಾಗೂ ವಿವಿಧ ಸಂಘಟನೆಗಳ ಮುಖಂಡರು ಪ್ರತಿಭಟನೆ ನಡೆಸಿದರು.

**ಪರಿಹಾರ ವಿತರಣೆ:**

ಜಿಲ್ಲಾಡಳಿತವು ಸಂತ್ರಸ್ತೆ ಕುಟುಂಬಕ್ಕೆ ದೌರ್ಜನ್ಯ ತಡೆ ಕಾಯ್ದೆಯಡಿ 8.25 ಲಕ್ಷ ಮಂಜೂರು ಮಾಡಿದ್ದು,

ಮೊದಲ ಹಂತದಲ್ಲಿ 4,12,500 ಚೆಕ್ ಅನ್ನು ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಮಹೇಶ ಪೋದ್ದಾರ ವಿತರಿಸಿದರು.

# ವಿಜಯಪುರ ಬಂದ್ ಗೆ ಉತ್ತಮ ಪ್ರತಿಕ್ರಿಯೆ: ಬಸ್ ನಿಲ್ದಾಣ ಖಾಲಿ ಖಾಲಿ





**ವರದಿ : ಲಾಲಸಾಬ ಸವಾರಗೋಳ**

**ವಿಜಯಪುರ :** ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ(ಸಿಜೆಐ) ಬಿ.ಆರ್. ಗವಾಯಿ ಅವರ ಮೇಲೆ ವಕೀಲನೊಬ್ಬ ಶೂ ಎಸೆಯಲು ಯತ್ನಿಸಿದ ಘಟನೆ ಖಂಡಿಸಿ ದಲಿತ ಸಂಘಟನೆಗಳ ಒಕ್ಕೂಟ, ಅಲ್ಪಸಂಖ್ಯಾತ ಮತ್ತು ಹಿಂದುಳಿದ ವರ್ಗಗಳ ಒಕ್ಕೂಟಗಳಿಂದ ಕರೆ ನೀಡಿರುವ ವಿಜಯಪುರ ಬಂದ್ ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಪ್ರತಿಭಟನಾ ಮೆರವಣಿಗೆಯು ಬೆಳಿಗ್ಗೆ 10 ಗಂಟೆಗೆ ವಿಜಯಪುರ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಗಣಪತಿ ಚೌಕ, ವಾಜಪೇಯಿ ಸರ್ಕಲ್, ಕಿರಾಣ ಬಜಾರ್, ಸಿದ್ದೇಶ್ವರ ರಸ್ತೆ, ಗಾಂಧಿ ವೃತ್ತದ ಮಾರ್ಗವಾಗಿ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದವರೆಗೆ ನಡೆಯಿತು.

ಈ ಬಂದ್ ಹಿನ್ನಲೆ ವಿಜಯಪುರ ನಗರದಲ್ಲಿ ಈ ಕ್ಷಣ (ಬೆಳಿಗ್ಗೆ 11.30ರ ಸಮಯ) ಸ್ತಬ್ಧ ವಾತಾವರಣ ನಿರ್ಮಾಣವಾಗಿದೆ.ಈ ಹಿನ್ನಲೆ ನಗರದ ಹಳೆಯ ಬಸ್ ನಿಲ್ದಾಣದಲ್ಲಿ ಈಗ ಒಂದೇ ಒಂದು ಬಸ್ಸು ನಿಲ್ದಾಣ-ಕ್ಕೆ ಸುಳಿಯುತ್ತಿಲ್ಲ. ಪ್ರಯಾಣಿಕರು ಇಲ್ಲ. ಬೆರಳೆಣಿಕೆಯಷ್ಟು ಪ್ರಯಾಣಿಕರು ಮಾತ್ರ ನಿಲ್ದಾಣದಲ್ಲಿ ಇದ್ದಾರೆ. ನಿಲ್ದಾಣದಲ್ಲಿ ಬೆಳ್ಳಂ ಬೆಳಿಗ್ಗೆ ಬೆರಳೆಣಿಕೆಯಷ್ಟು ಬಸ್ಸುಗಳು ಸಂಚ-ರಿಸಿದ ನೋಟ ಕಂಡು ಬಂದಿತ್ತು.

ಆದರೆ ಬಿಸಿಲೇರಿದಂತೆ ಬಂದ್ ಕಾವು ಪಡೆದುಕೊಂಡಿದೆ. ಮಧ್ಯಾಹ್ನ ವೇಳೆ ಸಮೀಪಿಸಿದ ಘಳಿಗೆಯಲ್ಲಿ ಒಂದು ಬಸ್ಸು ಇತ್ತ ಸುಳಿದಿಲ್ಲ. ಬಸ್ ನಿಲ್ದಾಣ ಪ್ರಯಾಣಿಕ-ರಿಲ್ಲದೆ ಬಣಗುಡುತ್ತಿದ್ದ ಕಾರಣ ಇಲ್ಲಿಕೆ ಪಾಲಿಕೆಯ ಸಿಬ್ಬಂದಿ ಬಸ್ ನಿಲ್ದಾಣದಲ್ಲಿ ಕಸಗೂಡಿಸುತ್ತಿರುವ ದೃಶ್ಯ. ನೀರಿನಿಂದ ನಿಲ್ದಾಣ ತೊಳೆಯುತ್ತಿರುವ ದೃಶ್ಯ ಕಂಡುಬಂದಿತು.

ನಗರದ ಗಾಂಧಿ ವೃತ್ತದಲ್ಲಿನ ಎಲ್.ಬಿ.ಎಸ್. ಮಾರುಕಟ್ಟೆ,ತರಕಾರಿಮಾರುಕಟ್ಟೆಸೇರಿದಂತೆ ನಗರದಾದ್ಯಂತ ಅಂಗಡಿ ಮಾಲಿಕರು ತಮ್ಮ ಅಂಗಡಿ ಬಂದ್ ಮಾಡಿದ್ದಾರೆ.

ಮತ್ತೊಂದೆಡೆ ಮದ್ಯ ಮಾರಾಟ ಇಡೀ ದಿನ ನಿಷೇಧಿಸಿದ ಹಿನ್ನಲೆ ಮದ್ಯದ ಅಂಗಡಿಗಳು ಬಂದ್ ಮಾಡಲಾಗಿದೆ. ಮತ್ತೊಂದೆಡೆ ನಗರದಲ್ಲಿಹಳ್ಳಿಗಾಡಿನಂತೆಬೆರಳೆಣಿಕೆಯಷ್ಟು ಅಟೋಗಳು ಓಡಾಡುತ್ತಿವೆ.

ಹೊಟೇಲ್, ಕಿರಾಣಿ ಅಂಗಡಿ, ಅರಬ್ಬಿ ಅಂಗಡಿ, ಮೆಡಿಕಲ್ ಅಂಗಡಿ, ಚಹಾದ ಕ್ಯಾಂಟಿನ್, ಮಿಠಾಯಿ ಅಂಗಡಿ, ಎಕ್ಕಾ ಗಾಡಿಯ ಮೇಲೆ ಹಣ್ಣುಗಳ ವ್ಯಾಪಾರ ಬಂದ್ ಆದ ನೋಟ ಕಂಡುಬಂದಿತು.

ಪ್ರಮುಖ ರಸ್ತೆಗಳಲ್ಲಿ ವಾಹನ ಸಂಚಾರ ಇಳಿಮುಖವಾಗಿ ನಗರವು ಹಳ್ಳಿಯಂತೆ ಕಂಗೊಳಿದ ದೃಶ್ಯಗಳು ಕಂಡು ಬಂದಿವೆ.

ಈ ಬಂದ್ ನೇತೃತ್ವವಹಿಸಿದ ಮಾಜಿ ಶಾಸಕ ರಾಜು ಆಲಗೂರ, ಕಾಂಗ್ರೇಸ್ ಮುಖಂಡ ಹಮೀದ್ ಮುಶ್ರೀಫ್, ಅಹಿಂದ ಮುಖಂಡ ಎಸ್.ಎಂ. ಪಾಟೀಲ ಗಣಿಹಾರ, ಬಿ.ಎಚ್. ಮಹಾಬರಿ, ಎಂಎಂಡಿಸಿ ಮುಖಂಡ ಇರಫಾನ ಶೇಖ್, ಯುವ ಧುರೀಣ ಎಂ.ಸಿ. ಮುಲ್ಲಾ ಸೇರಿದಂತೆ ಹಲವು ಮುಖಂಡರ ನೇತೃತ್ವದಲ್ಲಿ ನಗರದ ಗಾಂಧಿ ಚೌಕ್ದಿಂದ ಜಿಲ್ಲಾಧಿಕಾರಿಗಳ ಕಚೇರಿಯ ವರೆಗೆ ಶಾಂತಿಯುತ ಬ್ರಹತ್ ಪ್ರತಿಭಟನಾ ರ್ಯಾಲಿ ನಡೆಯಿತು.

# ಆಹಾರ ಪ್ರತಿಯೊಂದು ಜೀವಿಯ ಅಮೃತ



**ಕಲಬುರಗಿ:** ಮಾನವ ಸೇರಿ ಎಲ್ಲಾ ಜೀವಿಗಳಿಗೆ ಆಹಾರ ಅವಶ್ಯಕ. ಇದು ಮೂಲ ಅಗತ್ಯವಾಗಿದೆ. ಪ್ರತಿಯೊಬ್ಬ ಮನುಷ್ಯನಿಗೆ ಸದೃಢ ಮತ್ತು ಪೌಷ್ಠಿಕ ಆಹಾರ ದೊರೆಯಬೇಕು. ಆಹಾರ ಉತ್ಪಾದನೆಯ ಕಷ್ಟ ರೈತನಿಗೆ ಗೊತ್ತು. ಆಹಾರವನ್ನು ಅನಾವಶ್ಯಕವಾಗಿ ವ್ಯರ್ಥ ಮಾಡದೆ, ಅದನ್ನು ಸದುಪಯೋಗ ಮಾಡಿಕೊಳ್ಳಬೇಕು. ಆಹಾರ ಪ್ರತಿಯೊಂದು ಜೀವಿಗೆ ಅಮೃತವಿದ್ದಂತೆ ಎಂದು ಪ್ರಗತಿಪರ, ಸಾವಯುವ ರೈತ ಚಂದ್ರಶ್ಯಾ ಇಟಗಿ ಅಭಿಪ್ರಾಯಪಟ್ಟರು.

ಆಳಂದ ರಸ್ತೆಯ ಟೋಲಗೇಟ್ ಸಮೀಪದ ತಮ್ಮ ತೋಟದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಗುರುವಾರ ಜರುಗಿದ 'ವಿಶ್ವ ಆಹಾರ ದಿನಾಚರಣೆ'ಯಲ್ಲಿ ಗೌರವ ಸತ್ಕಾರ ಸ್ವೀಕರಿಸಿ, ಅವರು ಮಾತನಾಡಿದರು.

ಬಳಗದ ಅಧ್ಯಕ್ಷ ಹಾಗೂ ಅರ್ಥಶಾಸ್ತ್ರ ಉಪನ್ಯಾಸಕ ಎಚ್.ಬಿ.ಪಾಟೀಲಮಾತನಾಡಿ,ಜಗತ್ತಿನಪ್ರತಿಯೊಂದು ರಾಷ್ಟ್ರವು ಆಹಾರ ಲಭಿಸುವಿಕೆಯನ್ನು ಸಾಂವಿಧಾನಿಕ ಹಕ್ಕನಾಗಿಸಬೇಕು. ರೈತರು ಬೆಳೆದ ಫಸಲಿಗೆ ಸೂಕ್ತ ಬೆಲೆ ದೊರೆಯಬೇಕು. ಪ್ರತಿಯೊಬ್ಬರಿಗೂ ಆಹಾರ ದೊರೆಯುವುದನ್ನು ಖಾತರಿ ಮಾಡಿಕೊಳ್ಳುವುದು ನಾಗರಿಕ ಸಮಾಜದ ಕರ್ತವ್ಯವಾಗಿದೆ ಎಂದರು.

ನಾವು ಸೇವಿಸುವ ಆಹಾರವು ರಾಸಾಯನಿಕಗಳಿಂದ ಕೂಡಿದೆ. ಇದರಿಂದ ಅನೇಕ ಕಾಯಿಲೆಗಳು ಉಂಟಾಗುತ್ತಿವೆ. ಶುಚಿಯಾದ, ಸತ್ವಯುತ ಮತ್ತು ಸಮತೋಲಿತವಾದ ಆಹಾರದ ಸೇವನೆಯಿಂದ ದೇಹವು ಆರೋಗ್ಯಪೂರ್ಣವಾಗಿರಲು ಸಾಧ್ಯವಾಗುತ್ತದೆ. ಒಂದು ಅಂದಾಜಿನ ಪ್ರಕಾರ ನಮ್ಮ ದೇಶದಲ್ಲಿ ಪ್ರತಿದಿನಕ್ಕೆ ಸರಾಸರಿ ಒಬ್ಬ ವ್ಯಕ್ತಿಯಿಂದ 137 ಗ್ರಾಮ್ಸ್, ವರ್ಷಕ್ಕೆ 50 ಕೆಜಿ ಮತ್ತು ದೇಶದಲ್ಲಿ 78.2 ಮಿಲಿಯನ್ ಟನ್ಸ್ ಆಹಾರ ವ್ಯರ್ಥವಾಗುತ್ತಿದೆ ಎಂದು ಅಂದಾಜಿಸಲಾಗಿದೆ. ಒಟ್ಟು ಜನಸಂಖ್ಯೆಯ ಶೇ.14.37 ರಷ್ಟು ಜನರು ಅಪೌಷ್ಠಿಕತೆಯಿಂದ ಬಳಲುತ್ತಿದ್ದಾರೆ. ಆದ್ದರಿಂದ ಪ್ರತಿಯೊಬ್ಬರು ಅವಶ್ಯಕತೆಯಷ್ಟೆ ಆಹಾರವನ್ನು ಬಳಸಿ, ಯಾವುದೇ ಕಾರಣದಿಂದಲೂ ವ್ಯರ್ಥವಾಗದಂತೆ ಜಾಗೃತಿ ವಹಿಸುವ 'ಆಹಾರ ಸಂಸ್ಕೃತಿ' ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಕೃಷಿ ಅಧಿಕಾರಿ ಶಿವಯೋಗೆಪ್ಪಾ ಎಸ್.ಬಿರಾದಾರ, ಸಮಾಜ ಸೇವಕ ಅಸ್ಲಾಂ ಶೇಖ್, ರೈತರಾದ ಶರಣಬಸಪ್ಪ ಇಟಗಿ, ಶ್ರೀಶೈಲ್ ಕಲಬುರ್ಗಿ, ಶಿವಶರಣ ಕಾರಬಾರಿ, ಮಲ್ಲಿಕಾರ್ಜುನ ಬಿ.ಇಟಗಿ, ಮಲ್ಲಿಕಾರ್ಜುನ ಜಿ.ಇಟಗಿ, ರಾಜು ಕಮ್ಮನ್ ಸೇರಿದಂತೆ ಇನ್ನಿತರರಿದ್ದರು.

# ಕಲ್ಲಿನ ಕ್ವಾರಿ ಪರವಾನಿಗೆ ರದ್ದು ಮಾಡುವುಂತೆ ಅಗ್ರಹ

**ಕೋಲಾರ :** ತಾಲೂಕಿನ ಸಮೀಪದಲ್ಲಿ ಸರ್ವೇ ನಂಬರ್ 708 ರ 708/13 ಮತ್ತು 708/14 ರಲ್ಲಿ ಈಗಾಗಲೇ ತಗ್ಗು ತೋಡಿ ಕಲ್ಲು ಗಣಿಗಾರಿಕೆ ನಡೆಸುತ್ತಿದ್ದೂ ಅದನ್ನು ಬಂದ್ ಮಾಡುವಂತೆ ಕಳೆದ್ ವರ್ಷ ಜಿಲ್ಲಾಧಿಕಾರಿಗಳು ಹಾಗೂ ಸಂಭಂದಿಸಿದ ಅಧಿಕಾ-ರಿಗಳಿಗೆ ಮನವಿ ಸಲ್ಲಿಸಿರುವ ಹಿನ್ನಲೆಯಲ್ಲಿ ಅಧಿಕೃತವಾಗಿ ಬಂದ್ ಮಾಡಿದ್ದರು, ಆದರೆ ಈಗ ಮತ್ತೆ ಇದೆ ಭೂಮಿಗಳಿಗನ್ನು ಅಭಿವೃದ್ಧಿ ಮಾಡಲು ಅಧಿಕಾರಿಗಳು ಅನುಮತಿ ನೀಡುತ್ತಿದ್ದಾರೆ ಎಂಭ ಮಾಹಿತಿ ಬಂದಿರುವ ಹಿನ್ನಲೆಯಲ್ಲೇ ತಹಸೀಲ್ದಾರ್ ಅವರಿಗೆ ಮನವಿ ಸಲ್ಲಿಸಿ ಯಾವುದೇ ಕಾರಣಕ್ಕೂ ಅನುಮತಿ ನೀಡಬಾರದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ತಾಲೂಕಾ ಅಧ್ಯಕ್ಷರಾದ ಸೋಮು ಬಿರಾದಾರ ಅವರು ನೇತೃತ್ವದಲ್ಲಿ ಮನವಿ ಸಲ್ಲಿಸಲಾಯಿತು.

ಕಲ್ಲಿನ ಕ್ವಾರಿ ಪ್ರಾರಂಭ ಮಾಡಲು ಅನುಮತಿ ಕೊಡಬಾರದು ಇದರ ಅಕ್ಕಪಕ್ಕದಲ್ಲಿ ನೀರಾವರಿ ಜಮೀನುಗಳಿದ್ದು, ಸಮೀಪದಲ್ಲಿ ಅನೇಕ ಕುಟುಂಬಗಳು ಪುನರ್ ವಸ್ತಿಯಿಂದಾಗಿ ಗುಡಿಸಲಿನಲ್ಲಿ ಕಳೆದ ಹಲವಾರು ವರ್ಷಗಳಿಂದ ವಾಸ ಮಾಡುತ್ತಿದ್ದು ಮಕ್ಕಳು ವೃದ್ಧರು ಸೇರಿದಂತೆ ಎಲ್ಲರೂ ಅಲ್ಲಿರುವುದರಿಂದ ಕಳ್ಳು ಬ್ಲಾಸ್ಟ್ ಮಾಡುವುದರಿಂದ ಅವರ ಮೇಲೆ ಕಲ್ಲುಗಳ ಬಿದ್ದು ಜೀವ ಅಪಾಯ ಆಗೋದ್ರಲ್ಲಿ ಸಂದೇಹವಿಲ್ಲ ಆದ್ದರಿಂದ ಯಾವುದೇ ಕಾರಣಕ್ಕೂ ಇಲ್ಲಿ ಕಲ್ಲಿನ ಕ್ವಾರಿ ಮಾಡಬಾರದೆಂದು ಈ ಮೂಲಕ ಮತ್ತೊಮ್ಮೆ ಅಗ್ರಿಸುತ್ತೇವೆ. ಒಂದು ವೇಳೆ ಮಾನವೀಯತೆ ಮೀರಿ ನೀವು ಏನಾದರೂ ಸಂಬಂಧಿಸಿದ ಅಧಿಕಾ-ರಿಗಳು ಅನುಮತಿ ನೀಡಿದರೆ ಅಕ್ಕಪಕ್ಕದ ಎಲ್ಲ ರೈತರು ದನ ಕರ ಕುರಿ ಸಮೇತವಾಗಿ ತಹಶೀಲ್ದಾರ್ ಕಚೇರಿ ಮುಂದೆ ಉಗ್ರವಾದ ಹೋರಾಟ ಮಾಡಲಾಗುವುದೆಂದು ಈ ಮೂಲಕ ಅಗ್ರಹಿಸಲಾಯಿತು.

ಈ ವೇಳೆ ಮುದಕಣ್ಣ ಛಲವಾದಿ, ವಿಠ್ಠಲ್ ಬಿದರಿ, ಶಂಕ್ರಪ ಮಾಚಕಾನೂರ್, ಗೋಪಾಲ ಕಾಖಂಡಕಿ, ಕಲ್ಲಪ್ಪ ಗಿಡ್ಡಪ್ಪಗೊಳ್, ಶ್ರೀಶೈಲ್ ಸೊನ್ನದ, ಮುದಕಣ್ಣ ಛಲವಾದಿ ಪರಸು ಛಲವಾದಿ, ಮುತ್ತು ಸೊನ್ನದ ಸೇರಿದಂತೆ ಇತರರು ಇದ್ದರು.

# ಶಿವಲಿಂಗಪ್ಪ ಹೊಟ್ಕರ್ಗೆ ಧಾರವಾಡ ಕೃಷಿ ವಿವಿಯಿಂದ ಪಿಎಚ್‌ಡಿ

**ಆಳಂದ:** ಧಾರವಾಡದ ಕೃಷಿ ವಿಶ್ವವಿದ್ಯಾಲಯವು ಸಸ್ಯರೋಗ ಶಾಸ್ತ್ರ ವಿಭಾಗದ ಸಂಶೋಧನಾ ವಿದ್ಯಾರ್ಥಿಯಾಗಿರುವ ಪ್ರಾಧ್ಯಾಪಕ ತಾಲೂಕಿನ ಯಳಸಂಗಿ ನಿವಾಸಿ ಶಿವಲಿಂಗಪ್ಪ ನಿಂಗಪ್ಪ ಹೊಟ್ಕರ್ ಅವರಿಗೆ ಪಿಎಚ್‌ಡಿ ಪದವಿ ದೊರೆತ್ತಿದೆ.



ಆಳಂದ ತಾಲೂಕಿನ ಯಳಸಂಗಿ ಗ್ರಾಮದ ಶಿವಲಿಂಗಪ್ಪ ಹೊಟ್ಕರ್‌ಅವರು,ಧಾರವಾಡಕೃಷಿವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ. ಎಸ್. ಎ. ಅಷ್ಟಪುತ್ರೆ ಅವರ ಮಾರ್ಗದರ್ಶನದಲ್ಲಿ "ಶೇಂಗಾದಲ್ಲಿ ಬರುವ ಕಾಂಡಕೊಳೆ ರೋಗ"ದ ಮೇಲೆ ಸಂಶೋಧನೆ ನಡೆಸಿ, ಸೆಪ್ಟಂಬರ್ ತಿಂಗಳಲ್ಲಿ ತಮ್ಮ ಪ್ರಬಂಧವನ್ನು ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ್ದರು. ಇದರ ಆಧಾರದ ಮೇಲೆ, ಅಕ್ಟೋಬರ್ 6ರಂದು ವಿಶ್ವವಿದ್ಯಾಲಯವು ಅವರಿಗೆ ಪಿಎಚ್‌ಡಿ ಪದವಿ ಘೋಷಿಸಿ ಆದೇಶ ಹೊರಡಿಸಿದೆ.

ಪ್ರಸ್ತುತ, ಶಿವಲಿಂಗಪ್ಪ ಹೊಟ್ಕರ್ ಅವರು ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

"SIHI KAHI" Kannada Daily Morning, Editor, Owner, Publisher, Printer by MARUTI BASAVANTAPPA HOASAMANI Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at SUDIN PRINTERS, Sector No. 33, Shop No. 38 & 40, Opp. Ambedkar Bhavan, NAVANAGAR, BAGALKOT-587 101. Dist : Bagalkot, Karnataka State